ಸಂಪುಟ : 10 ಸಂಚಿಕೆ: 164 ಪುಟ : 4+2 ಬೆಲೆ: 3.00 ಮಂಗಳವಾರ ಆಗಸ್ಟ್ 05 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 164 Pages : 4+2 Price : 3.00 Tuesday August 05 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಹೆಸರು ಬೆಳೆಗೆ ವಿಪರೀತ ಹೆಚ್ಚಿದ ಕೀಟಗಳ ಹಾವಳಿ । ದುಬಾರಿ ಬೆಲೆಯ ಕ್ರಿಮಿನಾಶಕವೂ ನಿಷ್ಪ್ರಯೋಜಕವಾಯ್ತು!**

## ಹೆಸರು ಬೆಳೆದ ರೈತರ ಕನಸು ನುಚ್ಚುನೂರು!



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರೈತರ ಪ್ರಮುಖ ವಾಣಿಜ್ಯ ಬೆಳೆಯಾದ ಹೆಸರು ಕೀಟ ಬಾಧೆಯ ಅಬ್ಬರಕ್ಕೆ ಸಂಪೂರ್ಣ ಹಾಳಾಗುತ್ತಿದೆ. ಸದ್ಯ ಫಲಭರಿತ/ಕಟಾವು ಹಂತ ತಲುಪಿರುವ ಹೆಸರು ಬೆಳೆಗೆ ಕೊಂಬಿನ ಹುಳದ ಹಾವಳಿ ಹೆಚ್ಚಾಗಿದೆಯಲ್ಲದೆ, ಬೂದು, ತಾಮ್ರರೋಗಕ್ಕೆ ತುತ್ತಾಗಿದ್ದು ದುಬಾರಿ ಬೆಲೆಯ ಕ್ರಿಮಿನಾಶಕವೂ ನಿಷ್ಪ್ರಯೋಜಕವಾಗುತ್ತಿದೆ.

ಪ್ರತಿವರ್ಷ ಹೆಸರು ಬೆಳೆಯಿಂದ ಹಾನಿ ಅನುಭವಿಸುತ್ತಿದ್ದರೂ ರೈತರಿಗೆ ಹೆಸರಿನ ಮೇಲಿನ ಮೋಹ ಮಾತ್ರ ಕಡಿಮೆಯಾಗುತ್ತಿಲ್ಲ. ಈ ಬೆಳೆಗೆ ರೋಗ ತಪ್ಪಿದ್ದಲ್ಲ ಎಂದು ಗೊತ್ತಿದ್ದರೂ ಮತ್ತೆ ಹೊಸ ಪ್ರಯೋಗ, ಪ್ರಯತ್ನ ಮಾಡಿದರಾಯಿತು ಎಂದ ರೈತರ ಪ್ರಯತ್ನ, ಆಸೆ-ಕನಸಿಗೆ ಕೊಳ್ಳಿ ಇಟ್ಟಂತಾಗಿದೆ. ಏನೇ ಮುಂಜಾಗ್ರತಾ ಕ್ರಮ ಕೈಗೊಂಡರೂ ಅಸಮರ್ಪಕ ಮಳೆ, ಹವಾಮಾನ ವೈಪರಿತ್ಯ, ಪ್ರತಿ ವರ್ಷಕ್ಕಿಂತ ಹೆಚ್ಚಿರುವ ಕೀಟಬಾಧೆಯಿಂದ ಬೆಳೆ ಹಾಳಾಗುತ್ತಿದೆ.

ಕೀಟ/ರೋಗಬಾಧೆ ನಿಯಂತ್ರಣಕ್ಕೆ 2 ಬಾರಿ ಸಿಂಪರಣೆ ಮಾಡುತ್ತಿದ್ದ ರೈತರು ಈಗ 4–5 ಬಾರಿ ಸಿಂಪರಣೆ ಮಾಡಿದರೂ ನಿಯಂತ್ರಣಕ್ಕೆ ಬರುತ್ತಿಲ್ಲ. ದುಬಾರಿ ಬೆಲೆ ಅಂದರೆ ಒಮ್ಮೆ 1 ಎಕರೆ ಕ್ರಿಮಿನಾಶಕಕ್ಕೆ 5 ಸಾವಿರರೂ ಖರ್ಚು ಮಾಡಿದರೂ ಪರಿಣಾಮಕಾರಿಯಾಗುತ್ತಿಲ್ಲ. ಕೀಟಗಳ ಅಬ್ಬರಕ್ಕೆ ಮಾರಕ ಕೀಟನಾಶಕಗಳೂ ನಿಷ್ಪ್ರಯೋಜಕವಾಗುತ್ತಿವೆ. ಕೀಟಗಳ ನಿಯಂತ್ರಣಕ್ಕಾಗಿ ರೈರು ಪ್ರಮಾಣ ಮೀರಿ ಕೀಟನಾಶಕಗಳನ್ನು ಬಳಸುತ್ತಿದ್ದು, ಇದು ಫಲಭರಿತ ಬೆಳೆಯ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಕಳಪೆ ಔಷಧಿ ಕೊಡುತ್ತಿದ್ದೀರಿ ಎಂದು ರೈತರು ಕೃಷಿ ಇಲಾಖೆ ಹಾಗೂ ಮಾರಾಟಗಾರರೊಂದಿಗೆ ನಿತ್ಯ ಜಗಳ ಮಾಡುತ್ತಿದ್ದಾರೆ. ಪರಿಣಾಮವಾಗಿ, ಕಳೆದ 8–10 ದಿನಗಳಿಂದ ಕ್ರಿಮಿನಾಶಕ ಮಾರಾಟಗಾರರರು ಕೀಟನಾಶಕ ಮಾರಾಟಕ್ಕೆ ಹಿಂದೇಟು ಹಾಕುತ್ತಿದ್ದಾರೆ. ಕೊಟ್ಟರೂ, ಕೀಟಬಾಧೆ ಕಡಿಮೆಯಾಗದಿದ್ದರೆ ನಾವು ಜವಾಬ್ದಾರರಲ್ಲ ಎಂದು ಮೊದಲೇ ಹೇಳುತ್ತಿದ್ದಾರೆ. ಕೀಟಗಳು ಈಗ ಹೆಸರು ಬೆಳೆಯ ಎಲೆಯಷ್ಟೇ ಅಲ್ಲದೆ ಹೂಗೊಂಚಲು, ಹೀಚು, ಕಾಯಿ ತಿಂದು ಬೆಳೆ ಹಾಳು ಮಾಡಿದ್ದು ಬೆಳೆ ಬರಡಾಗಿದೆ.

> ಬೀಜ, ಗೊಬ್ಬರ, ಕ್ರಿಮಿನಾಶಕ ನಿರ್ವಹಣೆ ವೆಚ್ಚ ಸೇರಿ ಪ್ರತಿ ಎಕರೆಗೆ 30 ಸಾವಿರಕ್ಕಿಂತ ಹೆಚ್ಚು ಖರ್ಚು ಮಾಡಿದ್ದಾರೆ. ಫಸಲು ಬರುತ್ತದೆ ಎಂಬ ಭರವಸೆಯಿಂದ ಗೊಬ್ಬರ ಅಂಗಡಿಯಲ್ಲಿ ಉದ್ರಿ ಬೀಜ, ಗೊಬ್ಬರ, ಕ್ರಿಮಿನಾಶಕ ಖರೀದಿ, ದಲಾಲಿ ಅಂಗಡಿಯಲ್ಲಿ ಕೈಗಡ ಸಾಲ ಮಾಡಿದ್ದಾರೆ. ಈಗ ಸಾಲ ತೀರಿಸುವುದು ಹೇಗೆಂಬ ಚಿಂತೆಯಲ್ಲಿ ಒದ್ದಾಡುತ್ತಿದ್ದಾರೆ. ಕೃಷಿ ಇಲಾಖೆಯಿಂದಲೇ ಹೆಸರಾಂತ ಕಂಪನಿಗಳ, ಗುಣಮಟ್ಟದ ಕ್ರಿಮಿನಾಶಕ ಸಿಗುವಂತಾಗಬೇಕು. ಬೆಳೆವಿಮೆ ಪಾವತಿಸಿದ ರೈತರಿಗೆ ವಿಮೆ, ಬೆಳೆಹಾನಿ ಪರಿಹಾರ ಕಲ್ಪಿಸುವಲ್ಲಿ ಕೃಷಿ ಇಲಾಖೆ ಜವಾಬ್ದಾರಿ ನಿಭಾಯಿಸಬೇಕು. ಅಳಿದುಳಿದ ಫಸಲಿಗೆ ಮುಕ್ತ ಮಾರುಕಟ್ಟೆಯಲ್ಲಿ ಬೆಲೆ ಕಡಿಮೆಯಾದರೆ ಕೂಡಲೇ ಬೆಂಬಲ ಬೆಲೆಯಡಿ ಖರೀದಿಸುವಂತಾಗಬೇಕು.
>
> **– ಸೋಮನಗೌಡ್ರ ಪಾಟೀಲ, ಮಂಜುನಾಥ ನರೆಗಲ್,** ರಾಜಣ್ಣ ಹವಳದ–ರೈತರು.



ಗೋವಿನ ಜೋಳದ ನಂತರ ಹೆಚ್ಚು ಕ್ಷೇತ್ರದಲ್ಲಿ ಅಂದರೆ ಲಕ್ಷ್ಮೇಶ್ವರ ಸೇರಿ ತಾಲೂಕಿನ ರಾಮಗೇರಿ, ಯಳವತ್ತಿ, ಯತ್ನಳ್ಳಿ, ಶಿಗ್ಲಿ, ದೊಡ್ಡೂರ, ಸೂರಣಗಿ, ಬಾಲೆಹೊಸೂರ, ಅಕ್ಕಿಗುಂದ, ಬಡ್ನಿ, ಬಟ್ಟೂರ, ಹರದಗಟ್ಟಿ, ಅಡರಕಟ್ಟಿ, ಗೊಜನೂರ ಸೇರಿ ಒಟ್ಟು 15 ಸಾವಿರ ಎಕರೆ ಪ್ರದೇಶದಲ್ಲಿ ಹೆಸರು ಬಿತ್ತನೆಯಾಗಿದೆ. ಜೂನ್ ತಿಂಗಳಲ್ಲಿ ಅಸಮರ್ಪಕ ಮಳೆಯಿಂದ ಬಿತ್ತನೆ ಸಮಯವದಲ್ಲಿ ವ್ಯತ್ಯಾಸವಾಗಿತ್ತು. ನಂತರ ಜುಲೈನಲ್ಲಿ ಜಿಟಿಜಿಟಿ ಮಳೆ, ಮೋಡ ಕವಿದ ವಾತಾವರಣದಿಂದ ಕೀಟಬಾಧೆ ಹೆಚ್ಚಾಯಿತು. ಆಗಸ್ಟ್ ಕೊನೆಯ ವಾರದಲ್ಲಿ ಕಟಾವು ಮಾಡುವ ಮೊದಲೇ ಬೆಳೆ ಹಾಳಾಗಿರುವುದು ರೈತರ ಕನಸು ನುಚ್ಚುನೂರಾಗಿದೆ.

> ಹೂ, ಹೀಚು ಬಿಡುವ ಹಂತದಲ್ಲಿ ಅತಿಯಾದ ಕ್ರಿಮಿನಾಶಕ ಬಳಕೆ ಬೆಳೆಯ ಮೇಲೆ ದುಷ್ಪರಿಣಾಮ ಬೀರಿದೆ. ಹಸಿರು, ಕರಿ ಕೀಟ, ಕೊಂಬಿನಹುಳು ಪ್ರಮಾಣ ಹೆಚ್ಚಿದೆ. ಪ್ರಾರಂಭದಲ್ಲಿಯೇ ಎಲೆಗಳ ಕೆಳಗಿರುವ ಕೀಟವನ್ನು ಸೂಕ್ಷ್ಮವಾಗಿ ಗಮನಿಸಿ ಕ್ರಮ ಕೈಗೊಳ್ಳಬೇಕು. ಬೆಳೆ ಬದಲಾವಣೆ, ಮಣ್ಣು ಪರೀಕ್ಷೆ, ಬಿತ್ತನೆ ಪೂರ್ವದಲ್ಲಿ ಸರಿಯಾದ ಬೀಜೋಪಚಾರ ಅಗತ್ಯವಾಗಿದೆ. ಬೆಳೆಯ ಸ್ಥಿತಿಗತಿ, ಅವಧಿ ಪರಿಗಣಿಸಿ ಕ್ರಿಮಿನಾಶಕ ಬಳಸಬೇಕಾಗುತ್ತದೆ ಅದಕ್ಕಾಗಿ ರೈತರು ಜಾಗ್ರತೆ ವಹಿಸಬೇಕಾಗುತ್ತದೆ.
>
> **– ಚಂದ್ರಶೇಖರ ನರಸಮ್ಮನವರ.** ಕೃಷಿ ಅಧಿಕಾರಿಗಳು.

---

**ಸೇನೆಯಿಂದ ನಿವೃತ್ತರಾದ ಹವಾಲ್ದಾರ ಶರಣಪ್ಪ ರುದ್ರಪ್ಪ ಬೂದಿಹಾಳರಿಗೆ ಸ್ವಾಗತ ಕಾರ್ಯಕ್ರಮ**

## ಸೈನಿಕರಿಗೆ ಎಲ್ಲರೂ ಋಣಿಯಾಗಿರಬೇಕು

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇಶದ ಜನರು ನೆಮ್ಮದಿಯಿಂದ ಬದುಕಲು ಸೈನಿಕರು ತಮ್ಮ ಪ್ರಾಣವನ್ನೇ ಮುಡುಪಾಗಿಟ್ಟು ಹಗಲು–ರಾತ್ರಿ ಕಣ್ಣಲ್ಲಿ ಕಣ್ಣಿಟ್ಟು ದೇಶದ ಗಡಿ ಕಾಯುತ್ತಿರುವುದೇ ಕಾರಣವಾಗಿದೆ. ಅಂತಹ ಸೈನಿಕರಿಗೆ ಎಲ್ಲರೂ ಋಣಿಯಾಗಿರಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದಲ್ಲಿ ಭಾರತೀಯ ಸೇನೆಯಲ್ಲಿ 23 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಹವಾಲ್ದಾರ ಶರಣಪ್ಪ ರುದ್ರಪ್ಪ ಬೂದಿಹಾಳ ಅವರ ಸ್ವಾಗತ ಹಾಗೂ ಮೆರವಣಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.



ರಾಷ್ಟ್ರ ರಕ್ಷಣೆಗಾಗಿ ಸೈನಿಕರು ತಮ್ಮ ಜೀವನವನ್ನೇ ಮುಡುಪಾಗಿಟ್ಟಿದ್ದಾರೆ. ದೇಶದ ಸೈನಿಕರ ಸೇವೆ ಅನನ್ಯವಾದುದು. ನಿವೃತ್ತ ನಂತರ ಸ್ವಗ್ರಾಮಕ್ಕೆ ಬರುವ ಸೈನಿಕರನ್ನು ಸನ್ಮಾನಿಸುವುದರೊಂದಿಗೆ ಅವರು ಸೈನಿಕರ ವೃತ್ತಿಯ ಅನುಭವಗಳನ್ನು ಹಂಚಿಕೊಳ್ಳುವುದರಿಂದ ಎಲ್ಲರಲ್ಲಿ ದೇಶಭಕ್ತಿ ಮೂಡುತ್ತದೆ ಎಂದರು.

ಪಟ್ಟಣದ ಪಂಪ ವೃತ್ತದಿಂದ ಪ್ರಮುಖ ವಾರ್ಗದ ಮೂಲಕ ತೆರೆದ ವಾಹನದಲ್ಲಿ ನಿವೃತ್ತ ಸೈನಿಕ ಶರಣಪ್ಪ ಬೂದಿಹಾಳ ದಂಪತಿಗಳನ್ನು ಮೆರವಣಿಗೆ ವಾಡಿ ಗೌರವಿಸಲಾಯಿತು.

> ಗೌರವ ಸ್ವೀಕರಿಸಿದ ಶರಣಪ್ಪ ಬೂದಿಹಾಳ ಮಾತನಾಡಿ, ಸೇವಾ ನಿವೃತ್ತಿ ಹೊಂದಿದರೂ ದೇಶ ಸೇವೆಯಿಂದ ನಿವೃತ್ತಿಯಾಗಿಲ್ಲ. ದೇಶ ರಕ್ಷಣೆಗೆ ಯಾವಾಗ ಕರೆದರೂ ಹೋಗಲು ಸಿದ್ಧ. ದೇಶ ಸೇವೆ ದೇವರ ಸೇವೆ ಇದ್ದಂತೆ. ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಸೇನೆಗೆ ಸೇರಿ ದೇಶ ಸೇವೆಗೆ ಮುಂದಾಗಬೇಕು ಎಂದು ಹೇಳಿದರು.

ಈ ವೇಳೆ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಯೋಧರೆಂದರೆ ಅವರು ಬರೀ ವ್ಯಕ್ತಿಗಳಲ್ಲ. ಅವರು ದೇಶದ ಶಕ್ತಿ, ಕೀರ್ತಿ ಮತ್ತು ನಮ್ಮ ಹೆಮ್ಮೆ. ಅವರಿಂದಾಗಿ ಭಾರತ ಎಂದೆಂದಿಗೂ ಸುರಕ್ಷಿತ. ಪ್ರತಿಯೊಬ್ಬರೂ ಸೈನಿಕರನ್ನು ಗೌರವಿಸಬೇಕು ಎಂದರು.

ಮಾಜಿ ಸೈನಿಕರ ಸಂಘದ ಅಧ್ಯಕ್ಷ ವಿ.ಎಸ್. ಹಿರೇಮಠ, ಮಾಂತೇಶ ಸುಣಗಾರ, ಎಸ್.ಎಫ್. ಹಳ್ಯಾಳ, ರಮೇಶ ಹುಲಸೋಗಿ, ಹನಮಂತಗೌಡ ಶೀಲವಂತರ, ಬಿ.ಎಸ್. ಹಿರೇಮಠ, ಈರಪ್ಪ ಸಂಕ್ಲಿಪುರ, ರಮೇಶ ಹರಕೇರಿ, ಶೇಖರಪ್ಪ ತಹಸೀಲ್ದಾರ, ಟಿ.ಆಯ್. ಪೂಜಾರ, ಸುರೇಶ ಹುಲಿಕಟ್ಟಿ, ಹನಮಂತಗೌಡ ಪಾಟೀಲ ಸೇರಿದಂತೆ ಗೆಳೆಯರ ಬಳಗ, ಬಂಧುಗಳು ಪಾಲ್ಗೊಂಡಿದ್ದರು.

---

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಫೆಲೋಶಿಫ್‌ಗಾಗಿ ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರಿಂದ ಅಲ್ಪಸಂಖ್ಯಾತರ ಪಿ.ಎಚ್.ಡಿ ವಿದ್ಯಾರ್ಥಿಗಳಿಗೆ ಫೆಲೋಶಿಫ್‌ಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ವಿದ್ಯಾರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 30.09.2025 ಆಗಿದ್ದು, ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಖುದ್ದಾಗಿ ಅಭ್ಯರ್ಥಿಗಳೇ ಹಾಜರಾಗಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ರವರ ಕಚೇರಿಗೆ ಸಲ್ಲಿಸಲು ಸೂಚಿಸಿದೆ.

2025–26ನೇ ಸಾಲಿನಲ್ಲಿ ಪಿ.ಎಚ್.ಡಿ ನೋಂದಣಿಯಾಗಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳು ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು.ಪಿ.ಎಚ್.ಡಿ/ಎಂ.ಫಿಲ್ ಯಾವುದಾದರೂ ಒಂದು ಕೋರ್ಸ್‌ಗೆ ಮಾತ್ರ ಅರ್ಜಿ ಸಲ್ಲಿಸಬೇಕು.

ಅಂಚೆ ತೆರಪು/ಅರೆಕಾಲಿಕ/ದೂರ ಶಿಕ್ಷಣದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ರೂ.8.00 ಲಕ್ಷ ಮೀರಿರಬಾರದು. ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಭ್ಯರ್ಥಿಯ ಗರಿಷ್ಠ ವಯೋಮಿತಿ 35 ವರ್ಷ ಮೀರಿರಬಾರದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮತ್ತು ತಾಲೂಕ ಮಾಹಿತಿ ಕೇಂದ್ರಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

---

**ನುಲಿಯ ಚಂದಯ್ಯ ಜಯಂತಿ ಪೂರ್ವಭಾವಿ ಸಭೆ**

## ಅರ್ಥಪೂರ್ಣ ಆಚರಣೆಗೆ ಕ್ರಮ ವಹಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ನುಲಿಯ ಚಂದಯ್ಯ ಜಯಂತಿಯನ್ನು ಆಗಸ್ಟ್ 9ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಗುತ್ತಿದೆ. ಜಯಂತಿಯನ್ನು ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಕೆ.ಆರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ನುಲಿಯ ಚಂದಯ್ಯ ಜಯಂತಿ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ತಾಲೂಕು, ಗ್ರಾಮ ಪಂಚಾಯಿತಿ ಹಾಗೂ ಶಾಲೆಗಳಲ್ಲಿಯೂ ಸಹ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು. ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಶಿಷ್ಟಾಚಾರದನ್ವಯ




ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ವಿವಿಧ ಸಾಧನೆಗೈದ ಸಮಾಜದ 5 ಜನರಿಗೆ ಹಾಗೂ ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ಜಯಂತಿಯ ವೇದಿಕೆಯ ಕಾರ್ಯಕ್ರಮದ ಮುಂಚಿತವಾಗಿ ಮೆರವಣಿಗೆಯು ನಗರದ ಕಿತ್ತೂರು ಚೆನ್ನಮ್ಮ ಸರ್ಕಲ್‌ನಿಂದ ಕಾರ್ಯಕ್ರಮದ ಸ್ಥಳಕ್ಕೆ ತಲುಪಲಿದೆ. ನುಲಿಯ ಚಂದಯ್ಯ ಅವರ ಜೀವನ ಸಾಧನೆಗಳ ಕುರಿತು ಪ್ರೊ. ಎಂ.ಸಿ. ಕಟ್ಟಿಮನಿ ಉಪನ್ಯಾಸ ನೀಡಲಿದ್ದಾರೆ. ಮೆರವಣಿಗೆಯಲ್ಲಿ ಶಹನಾಯಿ ಕಲಾ ತಂಡ ಸೇರಿದಂತೆ ಎರಡು ಕಲಾ ಪ್ರಕಾರಗಳು ಪಾಲ್ಗೊಳ್ಳಲಿವೆ. ಕಾರ್ಯಕ್ರಮಕ್ಕೆ ಆಗಮಿಸುವ ಗಣ್ಯರಿಗೆ, ಸಮಾಜದ ಸಾರ್ವಜನಿಕರಿಗೆ ಉಪಹಾರ ವ್ಯವಸ್ಥೆ ಮಾಡಲಾಗುವುದು, ಪ್ರಚಾರಕ್ಕಾಗಿ ನಗರದ ವಿವಿಧೆಡೆ ಬ್ಯಾನರ್ ಅಳವಡಿಸಲಾಗುವುದು ಎಂದು ಸಭೆಗೆ ವಿವರಿಸಿದರು.

ಈ ಸಂದರ್ಭದಲ್ಲಿ ನುಲಿಯ ಚಂದಯ್ಯ ಸಮಾಜದ ಪ್ರಮುಖರಾದ ಮೋಹನ ಭಜಂತ್ರಿ, ಸುರೇಶ ಕಟ್ಟಿಮನಿ, ಮಾಂತೇಶ, ಭೀಮಸೇನ, ಪರಶುರಾಮ ಕಟ್ಟಿಮನಿ, ಅಶೋಕ ಕಟ್ಟಿಮನಿ, ಎಸ್.ಡಿ. ಭಜಂತ್ರಿ ಸೇರಿದಂತೆ ಸಮುದಾಯದ ಮುಖಂಡರು ಹಾಜರಿದ್ದರು.

---

## ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ ಬೀದಿಗಿಳಿದು ಹೋರಾಟ




■ **ವಿಜಯಸಾಕ್ಷಿ ಸುದ್ದಿ, ರೋಣ**

ಜಿ.ಎಸ್. ಪಾಟೀಲರು ಕೇವಲ ಮತಕ್ಷೇತ್ರದ ಅಥವಾ ಜಿಲ್ಲೆಯ ನಾಯಕರಲ್ಲ. ಅವರು ರಾಜ್ಯದ ನಾಯಕರು. ಹೀಗಾಗಿ, ಕಾಂಗ್ರೆಸ್ ಪಕ್ಷದ ವರಿಷ್ಠರು ಅವರಿಗೆ ಸಚಿವ ಸ್ಥಾನ ನೀಡದಿದ್ದರೆ ಬೀದಿಗಿಳಿದು ಹೋರಾಟ ನಡೆಸಬೇಕಾಗುತ್ತದೆ ಎಂದು ಕುದರಿಮೋತಿ ಶ್ರೀಮಠದ ವಿಜಯ ಮಹಾಂತ ಶ್ರೀಗಳು ಹೇಳಿದರು.

ಅವರು ಪಟ್ಟಣದ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಜರುಗಿದ ಮಾತೋಶ್ರೀ ಬಸಮ್ಮ ಸಂಗನಗೌಡ ಪಾಟೀಲ ಪಾಟೀಲರ 21ನೇ ಪುಣ್ಯಸ್ಮರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುವ ಸಂದರ್ಭದಲ್ಲಿ ಶಾಸಕ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿದರು.ಜಿ.ಎಸ್. ಪಾಟೀಲರು ಸರ್ವ ಧರ್ಮದವರನ್ನು ಗೌರವಿಸುವ ಮತ್ತು ಪ್ರೀತಿಸುವ ವ್ಯಕ್ತಿ. ಅಲ್ಲದೆ, ಕಾಂಗ್ರೆಸ್ ಪಕ್ಷದ ಸಂಘಟನೆಗೆ ರಾಜ್ಯವಷ್ಟೇ ಅಲ್ಲದೆ, ದೆಹಲಿ ವರಿಷ್ಠರು ನೀಡಿರುವ ಜವಾಬ್ದಾರಿಗಳನ್ನು ಸಹ ಸಮರ್ಪಕವಾಗಿ ನಿಭಾಯಿಸಿದ್ದಾರೆ. ಮುಖ್ಯವಾಗಿ ತೆಲಂಗಾಣದಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕ್ಷೇತ್ರಗಳಲ್ಲಿ ಪ್ರಚಾರ ನಡೆಸಿ ಅಭ್ಯರ್ಥಿಗಳ ಗೆಲುವಿನಲ್ಲಿ ಪ್ರಮುಖ ಪಾತ್ರವನ್ನು ವಹಿಸಿದ್ದಾರೆ ಎಂಬುದನ್ನು ಕಾಂಗ್ರೆಸ್ ಪಕ್ಷದ ನಾಯಕರು ಅರಿತು ಅವರಿಗೆ ಸಚಿವ ಸ್ಥಾನವನ್ನು ನಿಡಬೇಕು ಎಂದು ಆಗ್ರಹಿಸಿದರು. ಕಾಂಗ್ರೆಸ್ ಪಕ್ಷದ ನಿಷ್ಠಾವಂತರನ್ನು ಗೌರವಿಸುವ ಪಕ್ಷ ಎಂದು ಕಾರ್ಯಕರ್ತರು ಹೇಳುತ್ತಾರೆ. ಜಿ.ಎಸ್. ಪಾಟೀಲರ ಕುಟುಂಬವೇ ಕಾಂಗ್ರೆಸ್ ಪಕ್ಷದ ಸಂಘಟನೆಯಲ್ಲಿ ತೊಡಗಿಕೊಂಡು ಅದೆಷ್ಟು ವರ್ಷಗಳು ಕಳೆದವು ಎಂಬುದನ್ನು ಕಾರ್ಯಕರ್ತರು ತಿಳಿಯಬೇಕು. ಮುಖ್ಯವಾಗಿ ಪಕ್ಷದ ಮುಖಂಡರುಗಳು, ಅಭಿಮಾನಿಗಳು, ಕಾರ್ಯಕರ್ತರು ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ಬೀದಿಗಿಳಿದು ಹೋರಾಟ ಮಾಡಬೇಕು ಎಂದು ಶ್ರೀಗಳು ಕರೆ ನೀಡಿದರು.ಈ ಸಂಧರ್ಭದಲ್ಲಿ ಹಲವು ಮಠಾಧೀಶರು, ರಾಜಕೀಯ ಗಣ್ಯರು ಉಪಸ್ಥಿತರಿದ್ದರು.

---

## ಹಾಲಕೆರೆ ಬೆಳ್ಳಿ ರಥೋತ್ಸವ ಸಂಪನ್ನ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಹಾಲಕೆರೆ ಗ್ರಾಮದ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಲಿಂ. ಗುರು ಅನ್ನದಾನ ಸ್ವಾಮಿಗಳ 48ನೇ ಪುಣ್ಯಸ್ಮರಣೋತ್ಸವ, ಉಡಿ ತುಂಬುವ ಸಮಾರಂಭ, 'ಮರಳಿ ಮಣ್ಣಿಗೆ' ಜನಜಾಗೃತಿ ಕಾರ್ಯಕ್ರಮ ಹಾಗೂ ಬೆಳ್ಳಿ ರಥೋತ್ಸವ ಕಾರ್ಯಕ್ರಮವು ಸೋಮವಾರ ಸಂಜೆ ವೈಭವಯುತವಾಗಿ ನೆರವೇರಿತು.

ಹಾಲಕೆರೆ ಕ್ಷೇತ್ರಕ್ಕೆ ಆಗಮಿಸಿದ್ದ ಎಲ್ಲ ಹರ-ಗುರು-ಚರ ಮೂರ್ತಿಗಳು ಹಾಗೂ ಹಾಲಕೆರೆ ಸಂಸ್ಥಾನ ಮಠದ ಪೀಠಾಧೀಪತಿ ಮುಪ್ಪಿನ ಬಸವಲಿಂಗ ಸ್ವಾಮೀಜಿಯವರ ನೇತೃತ್ವದಲ್ಲಿ ಬೆಳ್ಳಿ ರಥೋತ್ಸವಕ್ಕೆ ಪೂಜೆ ಸಲ್ಲಿಸಿದರು. ನಂತರ ಸಂಜೆ 6ಕ್ಕೆ ಮಹಿಳೆಯರು, ವಿದ್ಯಾರ್ಥಿನಿಯರು ಜಯಘೋಷಗಳನ್ನು ಕೂಗುತ್ತ ಬೆಳ್ಳಿ ತೇರನ್ನು ಎಳೆದು ಸಂಭ್ರಮಿಸಿದರು.

ರಥವು ಯಶಸ್ವಿಯಾಗಿ ಮರಳಿ ಸ್ವಸ್ಥಳಕ್ಕೆ ಬಂದು ನಿಂತಾಗ ಚಪ್ಪಾಳೆ ತಟ್ಟಿದ ಭಕ್ತರು ಭಕ್ತಿಭಾವ ಮೆರೆದರು. ಮಹಿಳೆಯರು ಭಕ್ತಿ, ಶ್ರದ್ಧೆಯಿಂದ ತೇರಿಗೆ ಪುಷ್ಪ ಎರಚುವ ಮೂಲಕ ಸಂಭ್ರಮದಿಂದ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಗದಗ, ಧಾರವಾಡ, ಕೊಪ್ಪಳ, ಬಾಗಲಕೋಟ, ವಿಜಯನಗರ, ಬಳ್ಳಾರಿ, ರಾಯಚೂರು, ದಾವಣಗೇರಿ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಿಂದ ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

## ಸಂಪಾದಕೀಯ

### ನ್ಯಾಯಾಲಯದ ಆದೇಶದ ನಡುವೆಯೂ ಮುಷ್ಕರ: ಸಾರಿಗೆ ವ್ಯವಸ್ಥೆಯ ಭವಿಷ್ಯವೇನು?

ಮಂಗಳವಾರದಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸುವುದಾಗಿ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಅನಂತ ಸುಬ್ಬರಾವ್ ಅವರು ನೀಡಿರುವ ಹೇಳಿಕೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಹೈಕೋರ್ಟ್ ಆದೇಶದ ನಡುವೆಯೂ ಈ ನಿರ್ಧಾರ ಕೈಗೊಳ್ಳುವ ಮೂಲಕ, ಅವರು ಇಡೀ ರಾಜ್ಯದ ಜನರನ್ನೇ ಸಂಕಷ್ಟಕ್ಕೆ ದೂಡಿದ್ದಾರೆ. ಮುಷ್ಕರದ ಕಾರಣದಿಂದ ಮಂಗಳವಾರ ಬೆಳಗ್ಗೆ 6 ಗಂಟೆಯಿಂದಲೇ ರಾಜ್ಯಾದ್ಯಂತ ಸಾರಿಗೆ ಬಸ್‌ಗಳು ರಸ್ತೆಗೆ ಇಳಿಯುವುದಿಲ್ಲ ಎಂದು ಸ್ಪಷ್ಟಪಡಿಸಿರುವುದರಿಂದ, ಲಕ್ಷಾಂತರ ಜನರ ದೈನಂದಿನ ಚಟುವಟಿಕೆಗಳು ಅಸ್ತವ್ಯಸ್ತಗೊಳ್ಳಲಿವೆ.

ಅನಂತ ಸುಬ್ಬರಾವ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯಿಸುತ್ತಾ, ಕೋರ್ಟ್ ಆದೇಶ ತಲುಪಿದೆ, ಆದರೆ ಅದರ ವಿವರಗಳು ತಿಳಿದಿಲ್ಲ. ಆದರೂ ಮುಷ್ಕರ ನಿಲ್ಲಿಸುವುದಿಲ್ಲ ಎಂದು ಹೇಳಿರುವುದು ಸರಿಯಾದ ನಡೆಯಲ್ಲ.

ಕಾನೂನಿನ ಚೌಕಟ್ಟಿನಲ್ಲಿ ಕೆಲಸ ಮಾಡಬೇಕಾದ ಸಂಘಟನೆಗಳು, ನ್ಯಾಯಾಲಯದ ಆದೇಶವನ್ನು ಗೌರವಿಸುವುದು ಅತ್ಯಗತ್ಯ. ಆದೇಶದ ಕುರಿತು ಕಾನೂನು ತಜ್ಞರ ಸಲಹೆ ಪಡೆದು ಮುಂದಿನ ತೀರ್ಮಾನ ಕೈಗೊಳ್ಳುವುದು ಸೂಕ್ತ. ಆದರೆ, ತಕ್ಷಣವೇ ಮುಷ್ಕರ ಆರಂಭಿಸುವುದಾಗಿ ಹೇಳಿಕೆ ನೀಡಿರುವುದು, ಸಮಸ್ಯೆಯನ್ನು ಮತ್ತಷ್ಟು ಜಟಿಲಗೊಳಿಸುತ್ತದೆ.

ಸರ್ಕಾರ ಮತ್ತು ಕಾರ್ಮಿಕ ಸಂಘಟನೆಗಳ ನಡುವಿನ ಈ ಸಂಘರ್ಷದಲ್ಲಿ, ಸಾರ್ವಜನಿಕರು ಬಲಿಪಶುವಾಗುತ್ತಿದ್ದಾರೆ. ಸಾರಿಗೆ ವ್ಯವಸ್ಥೆಯು ಕೇವಲ ಒಂದು ಸೇವೆಯಲ್ಲ, ಅದು ಸಾಮಾನ್ಯ ಜನರ ಜೀವನದ ಅವಿಭಾಜ್ಯ ಅಂಗ. ಮುಷ್ಕರದಂತಹ ನಿರ್ಧಾರಗಳನ್ನು ಕೈಗೊಳ್ಳುವ ಮೊದಲು, ಅದರ ಪರಿಣಾಮಗಳ ಕುರಿತು ಗಂಭೀರವಾಗಿ ಚಿಂತಿಸಬೇಕಾದ ಅವಶ್ಯಕತೆಯಿದೆ.

ಸಾರ್ವಜನಿಕರ ಹಿತಾಸಕ್ತಿಗಳನ್ನು ಕಡೆಗಣಿಸಿ ಕೈಗೊಂಡ ಯಾವುದೇ ನಿರ್ಧಾರವು ಯಾರಿಗೂ ಒಳಿತು ಮಾಡುವುದಿಲ್ಲ. ಈ ಸಮಸ್ಯೆಗೆ ಸರಕಾರ ಆದಷ್ಟು ಬೇಗ ಪರಿಹಾರ ಕಂಡುಕೊಳ್ಳದಿದ್ದರೆ, ರಾಜ್ಯದ ಆರ್ಥಿಕ ಮತ್ತು ಸಾಮಾಜಿಕ ವ್ಯವಸ್ಥೆಗೆ ದೊಡ್ಡ ಹೊಡೆತ ಬೀಳುವುದು ಖಚಿತ.

### ಅಂಕಪಟ್ಟಿಯನ್ನು ಮಾತ್ರ ನೋಡಿ ನೌಕರಿ ಕೊಡುವುದು ಇನ್ನು ಕನಸಿನ ಮಾತು

# ಯುವಶಕ್ತಿಯಲ್ಲಿ ಬೇಕಿದೆ ಕೌಶಲ್ಯ ಅಭಿವೃದ್ಧಿ



ಕೇವಲ ಒಂದು ದಶಕದ ಹಿಂದೆ ಎಲ್ಲರ ಬಳಿ ಮೊಬೈಲ್ ಫೋನ್ ಇರಲಿಲ್ಲ. ಆಗ ಇಂಟರ್ನೆಟ್ ಸೌಲಭ್ಯ ಕೂಡ ಅಷ್ಟೇನೂ ಸುಲಭವಾಗಿ ದೊರೆಯುತ್ತಿರಲಿಲ್ಲವಾದ ಕಾರಣ ವಿವಿಧ ಗ್ಯಾಜೆಟ್‌ಗಳನ್ನು ಮಕ್ಕಳು ಬಳಸುವುದು ದೂರವಾಗುತ್ತಿತ್ತು. ಆದರೆ ಕೇವಲ ಕೆಲವೇ ವರ್ಷಗಳಲ್ಲಿ ಅಂತರ್ಜಾಲ ಸೌಲಭ್ಯ ಮನೆಮನೆಯ ಬಾಗಿಲು ತಟ್ಟಿದ್ದು, ಎಲ್ಲರ ಕೈಯಲ್ಲೂ ವಿವಿಧ ಬಗೆಯ ಮೊಬೈಲ್ ಸೆಟ್‌ಗಳು ಇದ್ದು ಚಿಕ್ಕ ಮಕ್ಕಳಿಂದ ಹಿಡಿದು ಮುದುಕರವರೆಗೆ ಹತ್ತು ಹಲವಾರು ಜಾಲತಾಣಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಇಂದಿನ ಯುವಶಕ್ತಿಯಲ್ಲಿರುವ ಚೈತನ್ಯ ಕುಗ್ಗುತ್ತಿದೆ.

ಮಕ್ಕಳು ಅತ್ಯವಶ್ಯಕವಾಗಿ ಹೊಂದಲೇಬೇಕಾದದ್ದು ಶಿಕ್ಷಣ. ಉತ್ತಮ ಬದುಕನ್ನು ಸಾಧಿಸಲು ಪದವಿಯವರೆಗಿನ ಓದು ಅನಿವಾರ್ಯವಷ್ಟೇ ಅಲ್ಲ, ಅವಶ್ಯಕತೆಯೂ ಹೌದು. ಓದಿನ ಜೊತೆ ಜೊತೆಗೆ ಉದ್ಯೋಗ ಮಾಡಲು ಅವಶ್ಯಕವಾದ ಕೌಶಲ್ಯ ತರಬೇತಿಯು ಇಂದಿನ ಮಕ್ಕಳಿಗೆ ಬೇಕೇ ಬೇಕು. ಅಂತರ್ಜಾಲದ ನೆರವಿನಿಂದ ಸಾಮಾಜಿಕ ಜಾಲತಾಣಗಳ ಒಳಹೊಕ್ಕು ತಾಂತ್ರಿಕ ಜ್ಞಾನವನ್ನು ಕೌಶಲ್ಯ ಪರಿಣತಿಯನ್ನು ಪಡೆಯುವ ನಿಟ್ಟಿನಲ್ಲಿ ಮಕ್ಕಳು ಕಾರ್ಯನಿರ್ವಹಿಸಲೇಬೇಕು.

ಪಾಲಕರು ಓದಿನ ವಿಷಯದಲ್ಲಿ ತಮ್ಮ ಆಸೆಗಳನ್ನು ಮಕ್ಕಳ ಮೇಲೆ ಹೇರದೆ ಅವರಿಗೆ ಆಸಕ್ತಿ ಇರುವ ವಿಷಯಗಳನ್ನು ಕಲಿಯಲು ಅವಕಾಶ ಮಾಡಿಕೊಡಬೇಕು. ಕೇವಲ ಪಾಲಕರು ಇಚ್ಛಿಸುತ್ತಾರೆ ಎಂಬ ಕಾರಣಕ್ಕಾಗಿ ಮಕ್ಕಳು ತಮಗೆ ಆಸಕ್ತಿ ಇಲ್ಲದ ವಿಷಯಗಳನ್ನು ಕಲಿಯಲು ಪ್ರಯತ್ನಿಸಿ ವಿಫಲರಾದಾಗ ಮಾನಸಿಕವಾಗಿ ಇಬ್ಬರೂ ನೋಯಬೇಕಾಗುತ್ತದೆ. ಬದಲಾಗಿ ಪಾಲಕರು ಮಕ್ಕಳ ಆಸಕ್ತಿಗೆ ನೀರೆರೆಯಬೇಕು. ಆಗ ಮಾತ್ರ ಮಕ್ಕಳು ತಮ್ಮ ಸಂಪೂರ್ಣ ಶ್ರಮವನ್ನು ಹಾಕಿ ಕಲಿಯಲು ಸಾಧ್ಯವಾಗುತ್ತದೆ.

ಈ ನಿಟ್ಟಿನಲ್ಲಿ ಪಾಲಕರು ಮತ್ತು ಮಕ್ಕಳು ಒಟ್ಟಿಗೆ ಕುಳಿತು ಸಮಾಲೋಚನೆ ಮಾಡುವ ಮೂಲಕ ಒಳಿತು-ಕೆಡುಕುಗಳ, ಅವಶ್ಯಕತೆ ಮತ್ತು ಅನವಶ್ಯಕತೆ ಕುರಿತು ಒಂದು ನೇರ ಮತ್ತು ಒಮ್ಮತದ ಅಭಿಪ್ರಾಯಕ್ಕೆ ಬರಬೇಕಾದದ್ದು ಅತ್ಯವಶ್ಯಕ. ಪರಸ್ಪರ ಮಾತುಕತೆ ಮತ್ತು ಸಮಾಲೋಚನೆ ಮಾಡದೆ ಹೋದರೆ ಪಾಲಕರಿಗೆ ತಮ್ಮ ಮಾತನ್ನು ಮಕ್ಕಳು ಕೇಳುತ್ತಿಲ್ಲ ಎಂಬ ಬೇಸರ ಮತ್ತು ಮಕ್ಕಳಿಗೆ ಪಾಲಕರು ತಮ್ಮ ಆಸಕ್ತಿಯನ್ನು ಗುರುತಿಸುವುದಿಲ್ಲ ಎಂಬ ಹತಾಶ ಭಾವಗಳ ನಡುವೆ ಮಗುವಿನ ಭವಿಷ್ಯ ಕಮರಿ ಹೋಗುವ ಸಂದರ್ಭಗಳು ಬರಬಹುದು.

ಇತ್ತೀಚೆಗೆ ಸ್ಕಿಲ್ ಸೆಟ್ ಅಂದರೆ ಕೌಶಲ್ಯಗಳ ಗುಚ್ಛ ಎಂದು ಹೇಳುವ ಹೊಸ ಹೊಸ ಕಲಿಕಾ ವಿಧಾನಗಳನ್ನು ನಾವು ಕಾಣಬಹುದು. ಕೇವಲ ಒಂದು ವಿಷಯವನ್ನು ಪಠ್ಯಕ್ರಮವಾಗಿ ಓದುವ ಸಮಯದಲ್ಲಿ ಆ ಪಠ್ಯಕ್ರಮಕ್ಕೆ ಸಂಬಂಧಿಸಿದಂತೆ ವಿವಿಧ ವಿಷಯಗಳು ಅರಿವನ್ನು ಮೂಡಿಸಿಕೊಳ್ಳುವುದನ್ನು ಸ್ಕಿಲ್ ಸೆಟ್ ಎಂದು ಹೇಳಲಾಗುತ್ತದೆ. ಉದಾಹರಣೆಗೆ, ಶಿಕ್ಷಕನಾದವನು ಕೇವಲ ಪಾಠ ಮಾಡುವುದಕ್ಕೆ ಮಾತ್ರ ಸೀಮಿತನಾಗದೆ ಮಗುವಿನ ಮಾನಸಿಕ ಆರೋಗ್ಯ, ದೈಹಿಕ ಬೆಳವಣಿಗೆ ಮತ್ತು ಮಕ್ಕಳಲ್ಲಿ ಉತ್ಸಾಹ-ಹುಮ್ಮಸ್ಸನ್ನು ತುಂಬಿ ಮುಂದಿನ ಬದುಕಿಗೆ ಅವರನ್ನು ಯಾವ ರೀತಿ ತಯಾರು ಮಾಡಬೇಕು ಎಂಬ ಅರಿವನ್ನು ಹೊಂದುವ ಹತ್ತು ಹಲವು ತರಬೇತಿಗಳನ್ನು ಆ ನಿಟ್ಟಿನಲ್ಲಿ ಪಡೆಯುವ ಮೂಲಕ ಕೌಶಲ್ಯವನ್ನು ಅಭಿವೃದ್ಧಿ ಮಾಡಿಕೊಳ್ಳುತ್ತಾನೆ.

ಇಂಜಿನಿಯರಿಂಗ್ ಅಭ್ಯಾಸ ಮಾಡುತ್ತಿರುವವರು ಕೋಡಿಂಗ್ ಮಾಡುವುದನ್ನು, ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಅನ್ನು, ಸ್ಟಾರ್ಟ್ ಅಪ್‌ಗಳಲ್ಲಿ ಕೆಲಸ ನಿರ್ವಹಿಸುವುದನ್ನು, ಸಂವಹನ ಕಲೆಯನ್ನು ಕಲಿಯುತ್ತಾರೆ. ಇವುಗಳನ್ನು ಸ್ಕಿಲ್ ಸೆಟ್ ಎಂದು ನಾವು ಕರೆಯಬಹುದು.

ಓದು ಮುಗಿದ ನಂತರ ಉದ್ಯೋಗದಲ್ಲಿ ಮುಂದುವರೆಯುವಾಗ ಕೇವಲ ನಮ್ಮ ಅಂಕಪಟ್ಟಿಯನ್ನು ಮಾತ್ರ ನೋಡಿ ನೌಕರಿ ಕೊಡುವುದು ಇದೀಗ ಕನಸಿನ ಮಾತು. ಬದಲಾಗಿ ಒಂದು ವಿಷಯದ ಕುರಿತು ನಾವು ಜ್ಞಾನ, ವೈವಿಧ್ಯಮಯ ಅರಿವನ್ನು ಹೊಂದಿದ್ದರೆ ಒಳ್ಳೆಯ ಕೆಲಸ ದೊರೆಯುವುದರಲ್ಲಿ ಯಾವುದೇ ಅನುಮಾನವಿಲ್ಲ. ಓದಿನ ಜೊತೆ ಜೊತೆಗೆ ಸಂವಹನ ಕೌಶಲ್ಯ, ಡಿಜಿಟಲ್ ಮಾರ್ಕೆಟಿಂಗ್, ಪ್ರಸ್ತುತ ಮಾರುಕಟ್ಟೆಯ ಅರಿವು ಹೀಗೆ ಹತ್ತು ಹಲವು ವಿಷಯಗಳ ಕುರಿತು ಜ್ಞಾನ ವೃದ್ಧಿಸಿಕೊಳ್ಳಬೇಕು.

ಹೋಟೆಲ್ ಮ್ಯಾನೇಜ್ಮೆಂಟ್ ಕಲಿಯುವ ವಿದ್ಯಾರ್ಥಿ ಕೇವಲ ಹೋಟೆಲ್‌ಗೆ ಸಂಬಂಧಿಸಿದ ವಿಷಯಗಳ ಕುರಿತು ಪಠ್ಯವಾಗಿ ಕಲಿಯಬಹುದು. ಜೊತೆಗೆ ಆರೋಗ್ಯಕರ ಆಹಾರ, ಆಹಾರದ ಗುಣಮಟ್ಟ, ಗ್ರಾಹಕರೊಂದಿಗಿನ ಸಂವಹನ, ಗ್ರಾಹಕರನ್ನು ಆಕರ್ಷಿಸಲು ಕೈಗೊಳ್ಳಬೇಕಾದ ಕ್ರಮಗಳು ಸಿಬ್ಬಂದಿಗಳ ನಿರ್ವಹಣೆ ಹೇಗೆ ಹತ್ತು ಹಲವು ವಿಷಯಗಳ ಕುರಿತು ಜ್ಞಾನವನ್ನು ಹೊಂದಿರಬೇಕು.

ನಾನು ಈ ಮೊದಲು ವಿಜ್ಞಾನದ ವಿದ್ಯಾರ್ಥಿಯಾಗಿದ್ದೆ. ಇದೀಗ ವಾಣಿಜ್ಯ ವಿಷಯದಲ್ಲಿ ತೆಗೆದುಕೊಂಡಿರುವ ನನಗೆ ಈ ಮೊದಲಿನ ವಿಜ್ಞಾನ ವಿಷಯ ಎಳ್ಳಷ್ಟೂ ಉಪಯೋಗವಾಗುವುದಿಲ್ಲ ಎಂಬ ನಿರಾಶೆ ಬೇಡ. ಕಲಿತ ವಿದ್ಯೆ ಬದುಕಿನ ಯಾವುದೇ ಘಟ್ಟದಲ್ಲಿಯೂ ನಮಗೆ ಸಹಾಯ ಮಾಡಬಹುದು.

ವಿವಿಧ ವಿಷಯಗಳ ಕುರಿತ ಅರಿವನ್ನು ಹೊಂದಿದ್ದು, ಸಕಾಲದಲ್ಲಿ ಅವುಗಳನ್ನು ಬಳಕೆ ಮಾಡಿಕೊಳ್ಳುವ ಮೂಲಕ ವಿದ್ಯಾರ್ಥಿ ತನ್ನ ಸರ್ವತೋಮುಖ ಬೆಳವಣಿಗೆಗೆ ಕಾರಣನಾಗಬೇಕು. ಬದುಕಿನಲ್ಲಿ ಯಶಸ್ಸನ್ನು ಕಾಣಬೇಕು. ಆ ನಿಟ್ಟಿನಲ್ಲಿ ಓದಿನ ಜೊತೆ ಜೊತೆಗೆ ಕೌಶಲ್ಯ ಅಭಿವೃದ್ಧಿ ಅತ್ಯವಶ್ಯಕ ಎಂಬ ಅರಿವನ್ನು ಪಾಲಕರು ಹೊಂದಿ ತಮ್ಮ ಮಕ್ಕಳಿಗೆ ಪ್ರೋತ್ಸಾಹವನ್ನು ನೀಡಲೇಬೇಕಾದದ್ದು ಪಾಲಕರ ಆದ್ಯ ಕರ್ತವ್ಯ.

-ವೀಣಾ ಹೇಮಂತ್‌ಗೌಡ ಪಾಟೀಲ್.
ಮುಂಡರಗಿ, ಗದಗ.

### ಸಮರ್ಪಕ ಯೂರಿಯಾ ಗೊಬ್ಬರ ಪೂರೈಕೆಗೆ ಆಗ್ರಹಿಸಿ ಬಿಜೆಪಿಯಿಂದ ಪ್ರತಿಭಟನೆ

# ಬೆಳೆವಿಮಾ ಭ್ರಷ್ಟಾಚಾರಕ್ಕೆ ಜನಪ್ರತಿನಿಧಿಗಳ ಬೆಂಬಲ




ಹೊಳೆಆಲೂರ, ರೋಣ ಹೋಬಳಿಯ ಕೆಲ ಗ್ರಾಮಗಳಲ್ಲಿ ರೈತರಿಗೆ ದೊರಕಬೇಕಿದ್ದ ಬೆಳೆವಿಮಾ ಹಣವು ನಿರ್ದಿಷ್ಟ ವ್ಯಕ್ತಿಯ ಪಾಲಾಗಿದ್ದು, ಇದನ್ನು ಪ್ರಶ್ನಿಸಿ ದಾಖಲೆಗಳನ್ನು ನೀಡುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಕೇಳಿದರೆ ಅವರು ಬೆಳೆವಿಮಾ ಹಣವನ್ನು ಲೂಟಿ ಮಾಡಿರುವ ವ್ಯಕ್ತಿಯ ಪರವಾಗಿ ನಿಂತು ನಮಗೆ ಬೆದರಿಕೆ ಹಾಕಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಕೃಷಿ ಅಧಿಕಾರಿ ಎಸ್. ಎಫ್. ತಹಸೀಲ್ದಾರರನ್ನು ತರಾಟೆಗೆ ತೆಗೆದುಕೊಂಡರಲ್ಲದೆ, ಇದು ಕೃಷಿ ಇಲಾಖೆಯಲ್ಲ, ಬದಲಾಗಿ ಕಾಂಗ್ರೆಸ್ ಪಕ್ಷದ ಕಚೇರಿಯಾಗಿದೆ ಎಂದು ಪಕ್ಷದ ಮುಖಂಡ ಮಲ್ಲು ಮಾದರ ತಮ್ಮ ಆಕ್ರೋಶವನ್ನು ಹೊರಹಾಕಿದರು.

■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಮತ್ತು ಗಜೇಂದ್ರಗಡ ತಾಲೂಕಿನಲ್ಲಿ ಯೂರಿಯಾ ಗೊಬ್ಬರ ಸಿಗದೆ ರೈತರು ತೇ-ೂಂದರೆ ಅನುಭವಿಸುತ್ತಿದ್ದು, ರಾಜ್ಯ ಸರಕಾರ ರೈತರ ಜೀವನದ ಜೊತೆ ಚೆಲ್ಲಾಟವಾಡುವುದನ್ನು ಬಿಟ್ಟು ಸಮರ್ಪಕವಾಗಿ ಗೊಬ್ಬರ ಪೂರೈಸಬೇಕು ಎಂದು ಆಗ್ರಹಿಸಿ ಬಿಜೆಪಿ ವತಿಯಿಂದ ಶನಿವಾರ ಪ್ರತಿಭಟನೆ ನಡೆಸಿದರು.

ರೋಣ ಮಂಡಲ ಅಧ್ಯಕ್ಷ ಉಮೇಶ ಮಲ್ಲಾಪೂರ ಮಾತನಾಡಿ, ರಾಜ್ಯಕ್ಕೆ ಅಗತ್ಯವಿರುವ ಯೂರಿಯಾ ಗೊಬ್ಬರವನ್ನು ಕೇಂದ್ರ ಸರಕಾರ ಬಿಡುಗಡೆ ಮಾಡಿದೆ. ಆದರೆ ರಾಜ್ಯದ ಕಾಂಗ್ರೆಸ್ ಸರಕಾರ ರೈತರಿಗೆ ಗೊಬ್ಬರವನ್ನು ವಿತತರಣೆ ಮಾಡದೆ ಅನ್ಯಾಯ ಮಾಡುತ್ತಿರುವುದು ಖಂಡನೀಯ. ಅಲ್ಲದೆ ರಾಜ್ಯ ಸರಕಾರ ಇಟ್ಟಿದ್ದ ಬೇಡಿಕೆಗಿಂತ ಹೆಚ್ಚು ಗೊಬ್ಬರವನ್ನು ಕೇಂದ್ರ ಸರಕಾರ ನೀಡಿದೆ. ಆದರೂ ರಾಜ್ಯ ಸರಕಾರ ರೈತರ ಜೀವನದ ಜೊತೆಗೆ ಚೆಲ್ಲಾಟವಾಡುತ್ತಿರುವುದು ನಾಚಿಕೆ ತರುವ ಸಂಗತಿಯಾಗಿದೆ ಎಂದು ಆಕ್ರೋಶ ಹೊರಹಾಕಿದರು.

ಮುತ್ತಣ್ಣ ಕಡಗದ ಮಾತನಾಡಿ, ರಾಜ್ಯ ಸರಕಾರ ಸೇರಿದಂತೆ ಸ್ಥಳೀಯ ಆಡಳಿತ ವ್ಯವಸ್ಥೆ ಸಮರ್ಪಕವಾಗಿ ಗೊಬ್ಬರ ಪೂರೈಸುವಲ್ಲಿ ವಿಳಂಬ ನೀತಿಯನ್ನು ಅನುಸರಿಸಬಾರದು. ಜಮೀನುಗಳಲ್ಲಿ ಬೆಳೆದು ನಿಂತಿರುವ ಬೆಳೆಗಳಿಗೆ ಸಂದರ್ಭಕ್ಕೆ ತಕ್ಕಂತೆ ಗೊಬ್ಬರ ಪೂರೈಸಿದರೆ ಮಾತ್ರ ರೈತರಿಗೆ ಉತ್ತಮ ಫಸಲು ಸಿಗುತ್ತದೆ. ಇಲ್ಲದಿದ್ದರೆ ಮತಕ್ಷೇತ್ರದ ರೈತರು ತೊಂದರೆ ಅನುಭವಿಸಬೇಕಾಗುತ್ತದೆ ಎನ್ನುವುದನ್ನು ಅರಿಯಬೇಕು ಎಮದರು.

ಪ್ರತಿಭಟನಾ ಮೆರವಣಿಗೆಯು ಪಟ್ಟಣದ ಸೂಡಿ ಕ್ರಾಸ್ ಮೂಲಕ ಮುಲ್ಲಾನಭಾವಿ, ಪೋತರಾಜನ ಕಟ್ಟೆ ಮೂಲಕ ಕೃಷಿ ಇಲಾಖೆ ತಲುಪಿತು. ಸೂಡಿ ವೃತ್ತ, ಮುಲ್ಲಾನಭಾವಿ ವೃತ್ತದ ಬಳಿ ಪಕ್ಷದ ಕಾರ್ಯಕರ್ತರು ಮಾನವ ಸರಪಳಿ ನಿರ್ಮಿಸಿ ರಾಜ್ಯ ಸರಕಾರದ ವಿರುದ್ಧ ಧಿಕ್ಕಾರ ಕೂಗಿದರು. ನಂತರ ಅವರು ಕೃಷಿ ಇಲಾಖೆಗೆ ತೆರಳಿ ಮನವಿ ಸಲ್ಲಿಸಿದರು. ಬಿಜೆಪಿ ಮುಖಂಡ ರವಿ ದಂಡಿನ, ತಾ.ಪಂ ಮಾಜಿ ಉಪಾಧ್ಯಕ್ಷೆ ಇಂದಿರಾ ತೇಲಿ, ಲಲಿತಾ ಮಾರನಬಸರಿ, ತಾ.ಪಂ ಮಾಜಿ ಸದಸ್ಯ ಆರ್.ಕೆ. ಚವ್ಹಾಣ, ಶರಣಯ್ಯ ಹಿರೇಮಠ, ಚಂದ್ರು ಮಾರನಬಸರಿ, ವೀರಣ್ಣ ಮರಡಿ, ಶಿವಕುಮಾರ ದಿಂಡೂರ, ಶರಣಪ್ಪ ಸಂಗಟಿ, ಶರಣಪ್ಪ ತಳವಾರ, ವಿರೂಪಾಕ್ಷ ಅಂಗಡಿ, ಮಲ್ಲು ಮಾದರ, ಪರಸು ಮಾದರ, ಬಸವರಾಜ ಕೊಟಗಿ, ಕುಮಾರ ಪಲ್ಲೇದ, ಶಿವಾನಂದ ಜಿಡ್ಡಿಬಾಗಿಲ, ಬಸವರಾಜ ಕೊಟಗಿ, ರಂಗನಗೌಡ್ರ ಸೇರಿದಂತೆ ಬಿಜೆಪಿ ಪಕ್ಷದ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಮುಗಿಯದ ಯೂರಿಯಾ ಗೊಬ್ಬರ ಸಮಸ್ಯೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ವ್ಯಾಪ್ತಿಯಲ್ಲಿ ಯೂರಿಯಾ ಗೊಬ್ಬರಕ್ಕಾಗಿ ರೈತರ ಪರದಾಟ ಮುಗಿಯದಂತಾಗಿದೆ. ಪಟ್ಟಣದ ಗೊಬ್ಬರ ಅಂಗಡಿಗಳಲ್ಲಿ ರೈತರು ಪಾಳಿಯಲ್ಲಿ ನಿಂತು ಗೊಬ್ಬರ ಪಡೆದಿದ್ದು, ಇದೀಗ ಪಟ್ಟಣದ ತಾಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘದಿಂದ ಗೊಬ್ಬರವನ್ನು ನೀಡಲಾಗಿದೆ. ಮಂಗಳವಾರ ಸುಮಾರು 25 ಟನ್‌ಗಳಷ್ಟು ಗೊಬ್ಬರ ನೀಡಲಾಗಿದ್ದು, ಶನಿವಾರ ಸುಮಾರು 20 ಟನ್‌ಗಳಷ್ಟು ಗೊಬ್ಬರ ವಿತರಿಸಲಾಗಿದೆ.

ತಾಲೂಕು ವ್ಯಾಪ್ತಿಯಲ್ಲಿ ಹದವರ್ತಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಯೂರಿಯಾ ಗೊಬ್ಬರಕ್ಕಾಗಿ ಬೇಡಿಕೆ ಹೆಚ್ಚಾಗಿದೆ. ಗೊಬ್ಬರ ದೊರೆಯದೆ ರೈತರು ಪರಿತಪಿಸುತ್ತಿದ್ದಾರೆ. ಈಗಾಗಲೇ ಮತ್ತೆ ಬೇವು ಲೇಪಿತ ಯೂರಿಯಾ ಗೊಬ್ಬರ ಪಟ್ಟಣದ ಕೆಲವು ಗೊಬ್ಬರ ಅಂಗಡಿಗಳಲ್ಲಿ ಲಭ್ಯವಿದ್ದು, ರೈತರು ಖರೀದಿಸುತ್ತಿದ್ದಾರೆ.

ಇದೀಗ ಟಿಎಪಿಸಿಎಂಎಸ್ ಆವರಣದಲ್ಲಿ ಎರಡು ದಿನಗಳ ಕಾಲ ರೈತರಿಗೆ ಒಂದು ಅಥವಾ ಎರಡು ಚೀಲಗಳಂತೆ ನಿಗದಿತ ದರದಲ್ಲಿ ವಿತರಣೆ ಮಾಡಲಾಗಿದೆ. ಪ್ರಸ್ತುತ ವರ್ಷ ತಾಲೂಕಿನಲ್ಲಿ ಗೋವಿನಜೋಳದ ಬಿತ್ತನೆ ಪ್ರದೇಶ ಸಾವಿರಾರು ಹೆಕ್ಟೇರ್ ಹೆಚ್ಚಾಗಿದ್ದು, ಉತ್ತಮ ಮಳೆಯೂ ಸುರಿದ ಪರಿಣಾಮ ಯೂರಿಯಾ ಗೊಬ್ಬರಕ್ಕೆ ಒಮ್ಮೆಲೇ ಬೇಡಿಕೆ ಹೆಚ್ಚುವಂತಾಗಿದೆ.

ನ್ಯಾನೋ ಯೂರಿಯಾ ಬಳಕೆ ಬಗ್ಗೆ ರೈತರಿಗೆ ಸಾಕಷ್ಟು ಮಾಹಿತಿ ನೀಡಲಾಗಿದ್ದು, ರೈತರು ನ್ಯಾನೋ ಯೂರಿಯಾ ಬಳಕೆಗೆ ಮುಂದಾಗಬೇಕು ಎಂದು ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ತಿಳಿಸಿದರು.

# ಜಂತ್ಲಿಶಿರೂರಿನಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಂತ್ಲಿಶಿರೂರಿನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಜಂತ್ಲಿಶಿರೂರ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ರವಿ ದೊಡ್ಡಮನಿ ಮಾತನಾಡಿ, ಡೆಂಗ್ಯೂ ರೋಗವು ಪ್ರಸಕ್ತ ದಿನಮಾನದ ಗಂಭೀರ ರೋಗವಾಗಿ ಪರಿಣಮಿಸಿದೆ. ಇದನ್ನು ತಡೆಗಟ್ಟಲು ಆರೋಗ್ಯ ಇಲಾಖೆ ಸಾಕಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದೆ. ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನರಿಗೆ ಮುಂಜಾಗ್ರತಾ ಕ್ರಮಗಳ ಕುರಿತು ಅರಿವು ಮೂಡಿಸುತ್ತಿದ್ದಾರೆ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಿಕಾರ್ಜುನ ಎಫ್.ಕಲಕಂಬಿ ಮಾತನಾಡಿ, ನೀರಿನ ತಾಣಗಳನ್ನು ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ ಎಂಬ ಘೋಷವಾಕ್ಯದೊಂದಿಗೆ ಈ ಸಾಂಕ್ರಾಮಿಕ ರೋಗವನ್ನು ಎಲ್ಲರೂ ಸೇರಿ ನಿಯಂತ್ರಿಸೋಣ ಎಂದರು.

ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಪಾಟೀಲ ಮಾತನಾಡಿ, ಈ ರೋಗವನ್ನು ನಿಯಂತ್ರಿಸಲು ಸಾರ್ವಜನಿಕರು ತಮ್ಮ ಮನೆಯಲ್ಲಿ ಹಾಗೂ ಮನೆಯ ಸುತ್ತಲೂ ಬಿದ್ದಿರುವ ಘನತ್ಯಾಜ್ಯಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ನೀರಿನ ಸಂಗ್ರಹದ ಮೇಲೆ ಬಟ್ಟೆ ಅಥವಾ ಮುಚ್ಚಳವನ್ನು ಮುಚ್ಚಬೇಕು ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ ಗುರಿಕಾರ ಮಾತನಾಡಿ, ಈ ರೋಗವನ್ನು ತಡೆಗಟ್ಟಲು ನಮ್ಮ ಇಲಾಖೆಯು ಗ್ರಾಮದಲ್ಲಿರುವ ಆಶಾ ಕಾರ್ಯಕರ್ತೆಯರು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಮೂಲಕ ಪ್ರತಿದಿನ ಲಾರ್ವಾ ಸಮೀಕ್ಷೆ ಮಾಡಿ, ಲಾರ್ವಾ ಕಂಡುಬಂದ ತಾಣಗಳನ್ನು ನಾಶಪಡಿಸುತ್ತಿದ್ದಾರೆ ಎಂದರು.

ಕಾ ಂ ರ್ು ರ್ ಕ್ರ ಮ ದ ಲ್ಲಿ ಜಂತ್ಲಿಶಿರೂರ ಗ್ರಾ.ಪಂ ಅಧ್ಯಕ್ಷೆ ಜೈತುನಬಿ ಬಳ್ಳಾರಿ, ಗ್ರಾ.ಪಂ ಸದಸ್ಯ ಯಲ್ಲಪ್ಪ ಹೊಂಬಳ, ಶಾಲಾ ಶಿಕ್ಷಕರಾದ ಎಸ್.ಎಮ್. ಮರಿಗೌಡರ, ಶ್ರೀಕಾಂತ ಗೌರಿಪುರ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಮಮ್ತಾಜ್ ಚಿಂತಗುಂಟಿ, ಅಂಗನವಾಡಿ ಕಾರ್ಯಕರ್ತೆಯರು ಮುಂತಾದವರಿದ್ದರು.

### 'ಗ್ಯಾರಂಟಿ' ಯೋಜನೆ ಸಿಗದ ಫಲಾನುಭವಿಗಳಿಗಾಗಿ ತಾಲೂಕು ಮಟ್ಟದ ವಿಶೇಷ ಅಭಿಯಾನ

# ಶೇ. 100 ಗುರಿಸಾಧನೆ ನಮ್ಮ ಧ್ಯೇಯ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಿಂದ ದೂರವಾಗಿರುವ ಅರ್ಹ ಕುಟುಂಬಗಳನ್ನು ಪಂಚ ಗ್ಯಾರಂಟಿ ಯೋಜನೆ ವ್ಯಾಪ್ತಿಗೆ ಸೇರಿಸಲು ರಾಜ್ಯದಲ್ಲೇ ಮೊದಲ ಬಾರಿಗೆ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ನೇತೃತ್ವದಲ್ಲಿ ಆರಂಭಿಸಲಾಗಿದ್ದ ವಿಶೇಷ ಅಭಿಯಾನವನ್ನು ಪುನಃ ಮುಂದುವರಿಸಲಾಗಿದೆ. ವಿಶೇಷ ಅಭಿಯಾನದಲ್ಲಿ ಗೃಹಲಕ್ಷ್ಮೀ, ಗೃಹಜ್ಯೋತಿ, ಯುವ ನಿಧಿಗೆ ಹಾಗೂ ರೇಷನ್ ಕಾರ್ಡ್ ತಿದ್ದುಪಡಿಗೆ ಅರ್ಜಿಗಳು ಸೇರಿ ಒಂದೇ ದಿನದಲ್ಲಿ ಒಟ್ಟು 150ಕ್ಕೂ ಅಧಿಕ ಅರ್ಜಿಗಳು ಸ್ವೀಕೃತಗೊಂಡವು.

ಈ ಸಂದರ್ಭದಲ್ಲಿ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿಗಳ ಅನುಷ್ಠಾನದಿಂದ ಗದಗ ತಾಲೂಕು, ಜಿಲ್ಲೆ ಸೇರಿ ರಾಜ್ಯಾದ್ಯಂತ ಬಡತನ ರೇಖೆಯಲ್ಲಿದ್ದ ಕುಟುಂಬಗಳನ್ನು ಆರ್ಥಿಕವಾಗಿ ಮೇಲೆತ್ತಲು ಸಹಕಾರಿಯಾಗಿದೆ. ಈಗಾಗಲೇ ಗದಗ ತಾಲೂಕಿನಲ್ಲಿ ಶೇ. 98ಕ್ಕೂ ಅಧಿಕ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆಗಳ ಸದುಪಯೋಗ 'ಪಡಿಸಿಕೊಂಡಿದ್ದಾರೆ.

ಉಳಿದ ಅರ್ಹ ಫಲಾನುಭವಿಗಳನ್ನು ಯೋಜನೆಯ ವ್ಯಾಪ್ತಿಗೆ ಸೇರಿಸಲು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಸಲಹೆಯಂತೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಈ ಅಭಿಯಾನದಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ ಫೋಟೊ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಈ ವಿಶೇಷ ಅಭಿಯಾನದಲ್ಲಿ ಪಂಚ ಗ್ಯಾರಂಟಿಗಳ ಯೋಜನೆ ವಂಚಿತ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿರುವುದು ಸಂತಸ ತಂದಿದ್ದು, ತಾಲೂಕಿನಲ್ಲಿ 100ಕ್ಕೆ 100ರಷ್ಟು ಅರ್ಹ ಫಲಾನುಭವಿಗಳು ಪಂಚ ಗ್ಯಾರಂಟಿಯಿಂದ ದೂರ ಉಳಿಯಬಾರದು ಎಂಬುದು ನಮ್ಮ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಮತ್ತೊಮ್ಮೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಪ್ರಾಧಿಕಾರದ ಸದಸ್ಯರಾದ ಕೃಷ್ಣಗೌಡ ಎಚ್.ಪಾಟೀಲ, ಶಂಭು ಕಾಳೆ, ಮೀನಾಕ್ಷಿ ಬೆನಕಣ್ಣವರ, ಸಾವಿತ್ರಿ ಹೂಗಾರ, ದಯಾನಚಿದ ಪವಾರ, ಸಂಗಮೇಶ ಕೆರಕಲಮಟ್ಟಿ, ಎನ್.ಬಿ. ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ, ದೇವರಡ್ಡಿ ತಿರ್ಲಾಪೂರ, ಮಲ್ಲಪ್ಪ ದಂಡಿನ ಚಿಂಚಲಿ, ಗಣೇಶಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ಭಾಷಾಸಾಬ ಮಲ್ಲಸಮುದ್ರ, ತಾಲೂಕು ಸಮಿತಿ ಸದಸ್ಯ ಕಾರ್ಯದರ್ಶಿ, ಗದಗ ತಾ.ಪಂ ಇಒ ಮಲ್ಲಯ್ಯ ಕೊರವನವರ ಮುಂತಾದವರಿದ್ದರು.

### ಸಚಿವ ಎಚ್.ಕೆ. ಪಾಟೀಲ ಮೆಚ್ಚುಗೆ

ರಾಜ್ಯದಲ್ಲಿ ಮೊಟ್ಟಮೊದಲ ಬಾರಿಗೆ ಗದಗ ತಾಲೂಕಿನಲ್ಲಿ ಈವರೆಗೂ ಪಂಚ ಗ್ಯಾರಂಟಿ ಯೋಜನೆಗಳ ಉಪಯೋಗ ಪಡೆಯದ ಫಲಾನುಭವಿಗಳಿಗೆ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳುವ ಮೂಲಕ ಪಂಚ ಗ್ಯಾರಂಟಿ ಯೋಜನೆಗಳ ವ್ಯಾಪ್ತಿಗೆ ಸೇರದ 150ಕ್ಕೂ ಅಧಿಕ ಅರ್ಹ ಫಲಾನುಭವಿಗಳನ್ನು ಸೇರ್ಪಡೆಗೊಳಿಸಿರುವುದು ಮಾದರಿಯಾಗಿದ್ದು, ಇದೇ ಮಾದರಿಯಲ್ಲಿ ಗ್ರಾಮ, ಹೋಬಳಿ, ವಾರ್ಡ್ ಮಟ್ಟದಲ್ಲಿ ಅಭಿಯಾನ ಹಮ್ಮಿಕೊಂಡು ರಾಜ್ಯದಲ್ಲಿ 100ಕ್ಕೆ 100ರಷ್ಟು ಅರ್ಹ ಫಲಾನುಭವಿಗಳನ್ನು ಪಂಚ ಗ್ಯಾರಂಟಿ ಯೋಜನೆಗಳ ವ್ಯಾಪ್ತಿಗೆ ಸೇರಿಸಬಹುದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಯಾನದ ಕುರಿತು ಮೆಚ್ಚುಗೆಯ ಮಾತುಗಳನ್ನಾಡಿ, ಬೆಂಬಲಿಸಿದ್ದಾರೆ.

# ನಡುರಸ್ತೆಯಲ್ಲೇ ಮಚ್ಚಿನಿಂದ ಕೊಚ್ಚಿ ಯುವಕನ ಬರ್ಬರ ಕೊಲೆ..!

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಡುರಸ್ತೆಯಲ್ಲೇ ಮಚ್ಚಿನಿಂದ ಕೊಚ್ಚಿ ಯುವಕನನ್ನು ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಭಾನುವಾರ ರಾತ್ರಿ ಕೊಪ್ಪಳ ನಗರದ ವಾರ್ಡ್ 3ರ ಮಸೀದಿ ಮುಂಭಾಗದಲ್ಲಿ ನಡೆದಿದೆ.

ಗವಿಸಿದ್ದಪ್ಪ ನಿಂಗಜ್ಜ ನಾಯಕ್ (30) ಕೊಲೆಯಾದ ಯುವಕನಾಗಿದ್ದು, ಪ್ರೀತಿ ವಿಚಾರಕ್ಕೆ ಕೊಲೆ ನಡೆದಿರುವ ಶಂಕೆ ವ್ಯಕ್ತವಾಗಿದೆ. ಯುವತಿಯ ಸಹೋದರನಿಂದ ಕೃತ್ಯ ನಡೆದಿದ್ದು, ಮೂರು ಜನರ ಗುಂಪಿನಿಂದ ಯುವಕನನ್ನು ಕೊಚ್ಚಿ ಕೊಲೆ ಮಾಡಲಾಗಿದೆ.

ಸ್ಥಳದಲ್ಲಿ ಎರಡು ಮಚ್ಚುಗಳು ಪತ್ತೆಯಾಗಿವೆ. ಓರ್ವ ಆರೋಪಿ ಪೊಲೀಸರಿಗೆ ಶರಣಾಗಿದ್ದಾನೆ. ಸ್ಥಳಕ್ಕೆ ನಗರ ಠಾಣೆಯ ಪೊಲೀಸರು ಭೇಟಿ, ನೀಡಿ ಪರಿಶೀಲನೆ ನಡೆಸಿದ್ದಾರೆ.



ಗದುಗಿನ ದಿ ಆಝಾದ ಕೋ-ಆಪ್ ಬ್ಯಾಂಕ್‌ನಲ್ಲಿ ರವಿವಾರ ಜರುಗಿದ 64ನೇ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯಿಂದ ಉದ್ಯೋಗ ರತ್ನ ಪ್ರಶಸ್ತಿ ಪಡೆದ ಬ್ಯಾಂಕ್‌ನ ಶೇರುದಾರರಾದ ಶರಣಬಸಪ್ಪ ಗುಡಿಮನಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬ್ಯಾಂಕ್ ಚೇರಮನ್ ಹಾಜಿ ಸರಫರಾಜ ಅಹ್ಮದ್ ಎಸ್.ಉಮಚಗಿ, ಡಾ. ರಾಜಶೇಖರ ಬಳ್ಳಾರಿ, ಡಾ. ಪ್ಯಾರ್‌ಅಲಿ ನೂರಾನಿ, ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಸೇರಿದಂತೆ ನಿರ್ದೇಶಕರು, ಗಣ್ಯರು ಪಾಲ್ಗೊಂಡಿದ್ದರು.

## ಆಝಾದ ಬ್ಯಾಂಕ್‌ನ 64ನೇ ವಾರ್ಷಿಕ ಸಭೆ | ಶೇ. 12 ಡಿವ್ಹಿಡೆಂಡ್ ಘೋಷಣೆ

# ಆಝಾದ್ ಬ್ಯಾಂಕ್ ಉತ್ತಮ ಸೇವೆ ನೀಡುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಬಡವರಿಗೆ, ಮಧ್ಯಮ ವರ್ಗದವರಿಗೆ ಹಾಗೂ ಸಣ್ಣ ವ್ಯಾಪಾರಸ್ಥರ ಆರ್ಥಿಕ ಸ್ಥಿತಿಯನ್ನು ಸುಧಾರಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವಲ್ಲಿ ಗದುಗಿನ ಆಝಾದ್ ಕೋ-ಆಪರೇಟಿವ್ ಬ್ಯಾಂಕ್ ಮುಂಚೂಣಿಯಲ್ಲಿದ್ದು, ಗ್ರಾಹಕರ, ಶೇರುದಾರರ ಬಾಳಿಗೆ ಬೆಳಕಾಗಿರುವ ಬ್ಯಾಂಕ್ ಆಗಿದೆ ಎಂದು ರಾಜ್ಯ ಐಎಂಎ ನಿಕಟಪೂರ್ವ ಅಧ್ಯಕ್ಷ ಡಾ. ರಾಜಶೇಖರ ಬಳ್ಳಾರಿ ಹೇಳಿದರು.

ಅವರು ಬ್ಯಾಂಕ್ ಸಭಾಂಗಣದಲ್ಲಿ ನಡೆದ ಬ್ಯಾಂಕ್‌ನ 64ನೇ ವಾರ್ಷಿಕ ಸಾಧಾರಣಾ ಸಭೆಯ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ಬೆಳೆದಂತೆ ಬ್ಯಾಂಕಿಂಗ್ ವ್ಯವಹಾರ ಆಧುಣೀಕರಣಗೊಂಡಿದೆ. ಆನ್‌ಲೈನ್, ಮೊಬೈಲ್ ಬ್ಯಾಂಕಿಂಗ್‌ನಿಂದ ಗ್ರಾಹಕರಿಗೆ ಶೀಘ್ರಗತಿಯಲ್ಲಿ ಸೇವೆ ಲಭ್ಯವಾಗುತ್ತಿದೆ. ಈ ಎಲ್ಲ ಸೌಲಭ್ಯಗಳೊಂದಿಗೆ ಗ್ರಾಹಕರಿಗೆ ಎಟಿಎಂ ಕಾರ್ಡ್ ನೀಡುವ ಮೂಲಕ ಆಝಾದ್ ಬ್ಯಾಂಕ್ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಸಿಗುವ ಸೌಲಭ್ಯ ನೀಡುವಷ್ಟರ ಮಟ್ಟಿಗೆ ಪ್ರಗತಿಯಾಗಿರುವದು ಹೆಮ್ಮೆಯ ಸಂಗತಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಬ್ಯಾಂಕ್ ಚೇರಮನ್ ಹಾಜಿ ಸರಫರಾಜಅಹ್ಮದ್ ಎಸ್.ಉಮಚಗಿ, ಮಾತನಾಡಿ ಆಝಾದ್ ಬ್ಯಾಂಕ್ ಕಳೆದ ವರ್ಷಗಿಂತಲೂ ಈ ವರ್ಷ ಎಲ್ಲ ರೀತಿಯಿಂದಲೂ ಮುನ್ನಡೆ ಸಾಧಿಸಿದೆ. 2024-25ನೇ ವರ್ಷದಲ್ಲಿ 1 ಕೋಟಿ 12 ಲಕ್ಷ 76 ಸಾವಿರ ರೂ. ಲಾಭದಲ್ಲಿದ್ದು, ಶೇರುದಾರರಿಗೆ ಶೇ. 12ರಷ್ಟು ಡಿವ್ಹಿಡೆಂಡ್ ನೀಡಲಿದೆ ಎಂದರು.



ಬ್ಯಾಂಕ್‌ಗೆ 5,742 ಜನ ಸದಸ್ಯರಿದ್ದು, 321.74 ಲಕ್ಷ ರೂ. ಶೇರು ಬಂಡವಾಳ, 8511.24 ಲಕ್ಷ ರೂ ಠೇವು ಹೊಂದಿದ್ದು, ಠೇವುಗಳ ಮೇಲೆ ವಿಮಾ ನಿಗಮದ ವಿಮಾ ಭದ್ರತೆ ಇದೆ. ದುಡಿಯುವ ಬಂಡವಾಳ 10029.65 ಲಕ್ಷ ರೂ ಆಗಿದೆ. ಬ್ಯಾಂಕ್‌ನ ಪ್ರಗತಿಗೆ ಠೇವಣಿದಾರರ, ಶೇರುದಾರರ, ಸಾಲಗಾರರ ಸಹಕಾರ ಅವಶ್ಯ ಎಂದರಲ್ಲದೆ, ಬ್ಯಾಂಕ್‌ನ ಸಿಬ್ಬಂದಿಯ ಪರಿಶ್ರಮದ ಕರ್ತವ್ಯವೂ ಇದೆ ಎಂದರು.

'ವಾಣಿಜ್ಯ ರತ್ನ' ಪ್ರಶಸ್ತಿಗೆ ಭಾಜನರಾದ ಬ್ಯಾಂಕ್‌ನ ಶೇರುದಾರರಾದ ಶರಣಬಸಪ್ಪ ಗುಡಿಮನಿ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು. ಸಭೆಯಲ್ಲಿ ಶೇರುದಾರರಾದ ಶರಣಬಸಪ್ಪ ಗುಡಿಮನಿ, ಎಂ.ಎಚ್. ಜಕ್ಕಲಿ, ಡಾ. ಇಮಾಮಹುಸೇನ ಸಾಮುದ್ರಿ, ಬಸವರಾಜ ದಂಡಿನ, ಬುಡ್ಡಣ್ಣ ಹಬೀಬ ಸಲಹೆ ಸೂಚನೆ ನೀಡಿದರು.

ಮ್ಯಾನೇಜಿಂಗ್ ಡೈರೆಕ್ಟರ್ ಎ.ಜಿ. ಯರಗುಡಿ ಸ್ವಾಗತಿಸಿ, ಸಭೆಯ ಅಜೆಂಡಾದ ವಿಷಯಗಳನ್ನು ಮಂಡಿಸಿ ಮಂಜೂರು ಪಡೆದರು. ಶಾಖಾ ವ್ಯವಸ್ಥಾಪಕ ಆರ್.ಎಂ. ನದಾಫ್ ಲೆಕ್ಕಪರಿಶೋಧನಾ ವರದಿ ಪ್ರಸ್ತುತಪಡಿಸಿದರು. ಬ್ಯಾಂಕ್‌ನ ನಿರ್ದೇಶಕರಾದ ಎಂ.ಎ. ಹಣಗಿ ಅವರು ನಿವ್ವಳ ಲಾಭ ಹಂಚಿಕೆ ವಿವರಣೆ ನೀಡಿದರು. ಪ್ರಧಾನ ಕಚೇರಿಯ ವ್ಯವಸ್ಥಾಪಕ ಯಾಸೀನ ಹುಬ್ಬಳ್ಳಿ ಅವರು ವಾರ್ಷಿಕ ಬಜೆಟ್ ಮಂಡಿಸಿ ಮಂಜೂರು ಪಡೆದರು.

ವೇದಿಕೆಯ ಮೇಲೆ ಬ್ಯಾಂಕಿನ ಉಪಾಧ್ಯಕ್ಷ ಹುಲಗಣ್ಣ ಬಳ್ಳಾರಿ, ನಿರ್ದೇಶಕರಾದ ಎನ್.ಬಿ. ಶಾಸ್ತ್ರಿ, ಎಂ.ಎಂ. ಶೇಖ, ಆರ್.ಎಲ್. ಬಾಗಲಕೋಟ, ಎಂ.ಎ. ಹಣಗಿ, ಗುಲ್ಜಾರ್‌ಭಾನು ಮುಜಾವರ, ಯಲ್ಲಪ್ಪ ತೋಟದ, ರೇಣುಕಾಬಾಯಿ ಕಲಾಲ, ಶಾನವಾಜ ಉಮಚಗಿ, ಬಿ.ಎಸ್. ಥಾಲಾಯತ, ಮಹೇಶ್ವರಯ್ಯ ಕೋಟಗುಣಶಿಮಠ, ಈಶ್ವರಪ್ಪ ಪಾತ್ರೋಟ, ಎಚ್.ಎನ್. ಇಟಗಿ, ಡಾ. ಪ್ಯಾರಅಲಿ ನೂರಾನಿ ಉಪಸ್ಥಿತರಿದ್ದರು.

ಮಹ್ಮದ್‌ಗೌಸ್ ಜಮಾಲಸಾಬನವರ ಖುರಾನ ಪಠಿಸಿದರು. ಎ.ಜಿ. ಯರಗುಡಿ ಪರಿಚಯಿಸಿ ನಿರೂಪಿಸಿದರು, ಯಾಸಿನ್ ಹುಬ್ಬಳ್ಳಿ ವಂದಿಸಿದರು. ಸಭೆಯಲ್ಲಿ ಶೇರುದಾರರು, ಗಣ್ಯರು ಪಾಲ್ಗೊಂಡಿದ್ದರು.

# ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26 ನೇ ಸಾಲಿಗೆ ಸಂಬಂಧಿಸಿದಂತೆ ಅರ್ಹ 1 ರಿಂದ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವರ್ಗದ ವಿದ್ಯಾರ್ಥಿಗಳಿಗೆ ಎಸ್.ಎಸ್.ಪಿ. ವಿದ್ಯಾರ್ಥಿ ವೇತನಕ್ಕಾಗಿ https://ssp.postmatric.karnataka.gov.in ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಈ ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಆನ್ ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30.09.2025.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇಲ್ಲಿ ಸಂಪರ್ಕಿಸಬಹುದಾಗಿದೆ.

# ವಾಣಿಜ್ಯ ವಿದ್ಯಾರ್ಥಿಗಳಿಂದ ಕೈಗಾರಿಕಾ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದ ದ್ವಿತೀಯ ವರ್ಷದ ವಾಣಿಜ್ಯ ವಿದ್ಯಾರ್ಥಿಗಳು ಮಹಾವಿದ್ಯಾಲಯದ ಉಪನ್ಯಾಸಕರೊಂದಿಗೆ, ನರಸಾಪೂರ ಇಂಡಸ್ಟ್ರಿಯಲ್ ಏರಿಯಾದಲ್ಲಿರುವ ಸಂಜೀವಿನಿ ವಾಟರ್ ಸ್ಟೋರೇಜ್ ಉತ್ಪನ್ನ ಘಟಕಕ್ಕೆ ಭೇಟಿ ನೀಡಿ ಸಿಂಟೆಕ್ಸ್‌ಗಳು ತಯಾರಾಗುವ ವಿಧಾನವನ್ನು, ಕಚ್ಚಾ ಸಾಮಾಗ್ರಿಗಳ ವ್ಯವಸ್ಥಿತ ಪೂರೈಕೆ, ಖರೀದಿ, ಸಾಗಾಟ, ಸಂಗ್ರಹಣೆಯ ಬಗ್ಗೆ ತಳಿದುಕೊಂಡರು.

ವಾಣಿಜ್ಯ ವಿಭಾಗದ ಕೋ-ಆರ್ಡಿನೇಟರ್ ಪ್ರೊ. ಎಸ್. ಎಸ್. ವಜ್ರಬಂಡಿ ಮಾತನಾಡಿ, ವ್ಯವಹಾರ ಅಧ್ಯಯನವನ್ನು ಪಠ್ಯದಲ್ಲಿ ಅಭ್ಯಸಿಸುವುದಕ್ಕೂ ಪಠ್ಯೇತರವಾಗಿ ಅಭ್ಯಸಿಸುವುದಕ್ಕೂ ವ್ಯತ್ಯಾಸವಿದೆ. ಈ ಸುವರ್ಣಾವಕಾಶವನ್ನು ನಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಒದಗಿಸಿಕೊಟ್ಟ ಸಂಜೀವಿನಿ ಸಿಂಟೆಕ್ಸ್ ಕಂಪನಿಯ ಮಾಲಕರಾದ ವಿನೋದ ಪಟೇಲರು ಅಭಿನಂದನಾರ್ಹರು ಎಂದರು.

ಮುಖ್ಯಸ್ಥರಾದ ವಿನೋದ ಪಟೇಲ ತಮ್ಮ ವ್ಯವಸ್ಥಾಪಕ ಸಿಬ್ಬಂದಿಯೊಂದಿಗೆ ಸಿಂಟೆಕ್ಸ್ ತಯಾರಿಕೆಯ ಹಂತವನ್ನು ವಿವರಿಸಿ, ಇಡೀ ಕರ್ನಾಟಕದಲ್ಲಿಯೇ ಪ್ರಪ್ರಥಮಬಾರಿಗೆ ಕಾಪರ್ ಆ್ಯಂಟಿ ಮೈಕ್ರೋಬಿಯಲ್ ವಾಟರ್ ಸ್ಟೋರೇಜ್ ಟ್ಯಾಂಕ್ ಉತ್ಪಾದಿಸುವ ಏಕೈಕ ಘಟಕ ನಮ್ಮದು ಎಂದರು.

ಸಂಜೀವಿನಿ ಉತ್ಪಾದನಾ ಘಟಕದ ಎಲ್ಲ ಪದಾಧಿಕಾರಿಗಳನ್ನು, ಸಿಬ್ಬಂದಿಯನ್ನು ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ರಾಹುಲ್ ಒಡೆಯರ್ ಹಾಗೂ ಮಹಾವಿದ್ಯಾಲಯದ ಉಪನ್ಯಾಸಕರಾದ ಪ್ರೊ. ಸಂಗೀತಾ ಬೀಳಗಿ, ಪ್ರೊ. ಡಿ.ಬಿ. ಕುಲಕರ್ಣಿ ಪ್ರಸಂಶಿಸಿದರು.

# ಶಿವಕುಮಾರ ಪಾಟೀಲರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಲ್ಲಿನ ಗೋಪನಕೊಪ್ಪದ ಶಾಂತವೀರ ಲೇಔಟ್‌ನಲ್ಲಿ ಉತ್ತಮ ರಸ್ತೆಯನ್ನು ನಿರ್ಮಿಸಿ ಕೊಟ್ಟಿದ್ದಕ್ಕಾಗಿ ವಾರ್ಡ್ ನಂ. 28ರ ಕಾರ್ಪೋರೇಟರ್ ಶಿವಕುಮಾರ ಪಾಟೀಲರನ್ನು ಬಡಾವಣೆಯ ನಿವಾಸಿಗಳ ಸಂಘದ ಪರವಾಗಿ ಅಭಿನಂದಿಸಲಾಯಿತು.

ಸಂಘದ ಅಧ್ಯಕ್ಷ ಆನಂದ ಹೆಚ್.ವಾಯ್ ಅವರ ಮನೆಯಲ್ಲಿ ಅಭಿನಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಗುಣಮಟ್ಟದ ಕಾಮಗಾರಿಯನ್ನು ನಿರ್ವಹಿಸಿದ್ದಕ್ಕಾಗಿ ಗುತ್ತಿದಾರ ಸಂಗಮೇಶ ಅವರನ್ನೂ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಸಂಜೀವಕುಮಾರ ಭೂಶೆಟ್ಟಿ, ಮೃತ್ಯುಂಜಯ್ ಶೆಟ್ಟರ್, ಬಸವರಾಜ್ ಶೆಟ್ಟರ್, ವಿಕ್ರಮ್ ವೆರ್ಣೇಕರ್, ಆರ್.ಕೆ. ಹೊಸಮನಿ, ದೀಪಕ್ ಪುರಾಣಿಕ್, ಗುಡ್ಡಪ್ಪ ಭೂಶೆಟ್ಟಿ, ಅಶೋಕ ಬಣಗಾರ್, ರಮೇಶ ಪಾಟೀಲ, ಸುನೀಲ್ ಜೀವನಗೌಡ್ರ, ಸಿದ್ದೇಶ ಅಂಗಡಿ, ರಘು ಸಂಗಮಿ, ಶಿವನಗೌಡ್ರ ಪಾಟೀಲ, ರಾಜು ಭೂಶೆಟ್ಟಿ ಹಾಗೂ ಶಾಂತವೀರ ಲೇಔಟ್ ನಿವಾಸಿಗಳು ಉಪಸ್ಥಿತರಿದ್ದರು.

# ನಿಧನ

## ಅನಸಮ್ಮ ನಾಲವಾಡದ



**ನರೇಗಲ್ಲ:** ಸಮೀಪದ ಜಕ್ಕಲಿ ಗ್ರಾಮದ ನಿವಾಸಿ ಅನಸಮ್ಮ ಕೋಂ ಸಿದ್ದಲಿಂಗಪ್ಪ ನಾಲವಾಡದ (95) ಇವರು ಆಗಸ್ಟ್ 1ರಂದು ನಿಧನರಾದರು. ಮೃತರಿಗೆ ಮೂವರು ಪುತ್ರರು, ಐದು ಜನ ಪುತ್ರಿಯರು, ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗದವರು ಇದ್ದಾರೆ.

# ಶಿಕ್ಷಕರು, ಸೈನಿಕರು, ರೈತರು ದೇಶದ ಸಂಪತ್ತು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾದಾನಕ್ಕಿಂತ ಶ್ರೇಷ್ಠದಾನ ಮತ್ತೊಂದಿಲ್ಲ. ಸರಕಾರಿ ಶಾಲೆಯಲ್ಲಿ ಕಲಿತ, ಆರ್ಥಿಕವಾಗಿ ಸಬಲರಾದ ಹಳೆ ವಿದ್ಯಾರ್ಥಿಗಳು ಇಂದು ಆ ಶಾಲೆಗಳ ಅಭಿವೃದ್ಧಿಗೆ ಕೈ ಜೋಡಿಸಬೇಕು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಭಾನುವಾರ ಪಟ್ಟಣದ ವರ್ತಕರ ಸಮುದಾಯ ಭವನದಲ್ಲಿ ಜಗದ್ಗುರು ಶ್ರೀ ಗಂಗಾಧರ ಸರಕಾರಿ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳಿಂದ ನಡೆದ ಗುರುವಂದನಾ, ಸ್ನೇಹ ಸಮ್ಮಿಲನ, ನಿವೃತ್ತ ಯೋಧರು, ಪ್ರಗತಿಪರ ರೈತರು ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಶಿಕ್ಷಕರು, ಸೈನಿಕರು, ರೈತರು ಈ ದೇಶದ ಸಂಪತ್ತಾಗಿದ್ದು, ಅವರನ್ನು ಸದಾ ಗೌರವಿಸುವ ಎಲ್ಲರ ಕರ್ತವ್ಯವಾಗಿದೆ. ಅನ್ನ ನೀಡುವ ಅನ್ನದಾತರು, ದೇಶ ಕಾಯುವ ಸೈನಿಕರು, ಅಜ್ಞಾನ-ಅಂಧಕಾರ ತೊಡೆದು ಜ್ಞಾನದ ಬೆಳಕು ಮೂಡಿಸುವ ಶಿಕ್ಷಕರು ಸದಾ ಸ್ಮರಣೀಯರು. ಈ ನಿಟ್ಟಿನಲ್ಲಿ ಈ ಶಾಲೆಯ ಹಳೆಯ ವಿದ್ಯಾಥಿಗಳು ಇವರನ್ನು ಅಭಿನಂದಿಸುವ ಕಾರ್ಯ ಮಾಡಿರುವುದು ಮಾದರಿಯಾಗಿದೆ ಎಂದರು.



ಕಾರ್ಯಕ್ರಮ ಅಧ್ಯಕ್ಷತೆ ನಿವೃತ್ತ ಮುಖ್ಯೋಪಾಧ್ಯಾಯ ಎಚ್.ಸಿ. ರಟಗೇರಿ ವಹಿಸಿದ್ದರು. ಈ ವೇಳೆ ನಿವೃತ್ತ ಶಿಕ್ಷಣ ಅಧಿಕಾರಿಗಳಾದ ಎಂ.ಎಂ. ಹವಳದ, ಆರ್. ಎನ್. ಪಂಚಬಾವಿ, ಮುಖ್ಯೋಪಾಧ್ಯಾಯ ಬಿ.ಸಿ. ಪಟ್ಟೇದ, ಎ.ಎಸ್. ತೋರಾತ, ಸಿ.ಎಸ್. ನದಾಫ್, ಸಿ.ಎಸ್. ನದಾಫ್, ಎ.ಎಸ್. ಪಾಟೀಲ, ಎಲ್.ವ್ಹಿ. ಮುದೆನೂರ, ಅಯ್.ಸಿ. ಕಣವಿ, ವ್ಹಿ.ಜಿ. ಜಾಧವ, ಎಂ.ಆರ್. ಹಿರೇಮಠ ಸೇರಿದಂತೆ ಶಾಲಾ ಶಿಕ್ಷಕರ ಸಿಬ್ಬಂದಿಗಳು, ಹಳೆಯ ವಿದ್ಯಾರ್ಥಿಗಳು, ಎಸ್‌ಡಿಎಂಸಿಯವರು ಇದ್ದರು. ಮುದಗಲ್, ಚಂದ್ರು ಮಾಗಡಿ ನಿರೂಪಿಸಿದರು.

# ವಾಣಿಜ್ಯೋದ್ಯಮಿಗಳ ಕ್ರಿಕೆಟ್ ಟೂರ್ನಾಮೆಟ್ ಯಶಸ್ವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವದ ಸಂಭ್ರಮ, ಅಖಿಲ ಕರ್ನಾಟಕ ವಾಣಿಜ್ಯೋದ್ಯಮಿಗಳ ಸಮ್ಮೇಳನ, ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟಗಳ 'ಗದಗ ಉತ್ಸವ-2025'ರ ನಿಮಿತ್ತ ರವಿವಾರ ಕ್ರಿಕೆಟ್ ಟೂರ್ನಾಮೆಟ್ ಆಯೋಜಿಸಲಾಗಿತ್ತು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸದಸ್ಯರ ನಾಲ್ಕು ತಂಡಗಳು ಭಾಗವಹಿಸಿದ್ದು, 10 ಓವರ್‌ಗಳ ಪಂದ್ಯಗಳನ್ನು ಆಡಿಸಲಾಯಿತು. ಅಂತಿಮವಾಗಿ ಗ್ರೇನ್ ಮಾರುಕಟ್ಟೆ ತಂಡ ಟಾಸ್ ಗೆದ್ದು ಕ್ಷೇತ್ರ ರಕ್ಷಣೆಗೆ ಇಳಿಯಿತು. ಎಸ್.ಪಿ. ವಾರಿಯರ್ ಎ.ಪಿ.ಎಂ.ಸಿ ತಂಡ ಬ್ಯಾಟಿಂಗ್‌ಗೆ ಇಳಿದು 10 ಓವರ್‌ನಲ್ಲಿ ನಾಲ್ಕು ವಿಕೆಟ್ ನಷ್ಟಕ್ಕೆ 86 ರನ್ ಗಳಿಸಿತು.

ನಂತರ ಗ್ರೇನ್ ಮಾರ್ಕೆಟ್ ತಂಡ ಬ್ಯಾಟಿಂಗ್ ಮಾಡಿ, 10 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡಿತು. ಅಂತಿಮ ಓವರ್‌ನಲ್ಲಿ ಒಂದು ಬಾಲ್‌ಗೆ ಒಂದು ರನ್ ಅವಶ್ಯಕತೆ ಇದ್ದಾಗ ಮ್ಯಾಚ್ ಕುತೂಹಲ ಕೆರಳಿಸಿತು. ಕೊನೆಯ ಎಸೆತಕ್ಕೆ ಒಂದು ಸಿಕ್ಸ್ ಬಾರಿಸಿದ ಗ್ರೇನ್ ಮಾರ್ಕೆಟ್ ತಂಡ ಪ್ರಥಮ ಸ್ಥಾನ ಗಳಿಸಿತು. ಎಸ್.ಪಿ. ವಾರಿಯರ್ ಎ.ಪಿ.ಎಂ.ಸಿ ತಂಡ ರನ್ನರ್ ಆಗಿ ಹೊರಹೊಮ್ಮಿತು.

ವಿಜೇತ ತಂಡಗಳಿಗೆ ಬಹುಮಾನ, ಪಾರಿತೋಷಕವನ್ನು ಗದುಗಿನ ರಣಜಿ ಕ್ರಿಕೆಟ್ ಆಟಗಾರ ಸುನಿಲ್ ಜೋಶಿ ವಿತರಿಸಿ ಶುಭಾಶಯ ಕೋರಿದರು. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಪಾಟೀಲ, ಉಪಾಧ್ಯಕ್ಷರು, ಸದಸ್ಯರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶವನ್ನು ಒದಗಿಸುವ ನಿಟ್ಟಿನಲ್ಲಿ ಹೋಟೆಲ್ ಮ್ಯಾನೇಜ್‌ಮೆಂಟ್ ವೃತ್ತಿಪರ ತರಬೇತಿಯನ್ನು ಇನ್‌ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಬೆಂಗಳೂರು ಇಲ್ಲಿ ನೀಡಲಾಗುತ್ತಿದ್ದು, ಸದರಿ ತರಬೇತಿಗೆ ವಿದ್ಯಾರ್ಥಿಗಳಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 11.08.2025. ಆಗಿರುತ್ತದೆ.

ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪಾರ್ಶಿ). ವಿದ್ಯಾರ್ಥಿಯು ಕನಿಷ್ಠ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.

ಕುಟುಂಬದ ವಾರ್ಷಿಕ ಆದಾಯ ರೂ. 8.00 ಲಕ್ಷಕ್ಕಿಂತ ಹೆಚ್ಚು ಮೀರಿರಬಾರದು. ವಿದ್ಯಾರ್ಥಿಯ ವಯೋಮಿತಿ: ಕನಿಷ್ಠ 18 ಹಾಗೂ ಗರಿಷ್ಠ 35 ವರ್ಷಗಳು ಮೀರಿರಬಾರದು. ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : 8277799990 ಇವರನ್ನು ಸಂಪರ್ಕಿಸಬಹುದು.

# ವಿದ್ಯಾರ್ಥಿಗಳಿಗೆ ಸಂಸತ್ತಿನ ಅರಿವು ಅವಶ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಾಲಾ ಮಟ್ಟದಲ್ಲಿಯೇ ವಿದ್ಯಾರ್ಥಿಗಳು ಸಂಸತ್ತಿನ ಕಾರ್ಯಕಲಾಪಗಳ ಬಗ್ಗೆ ತಿಳಿದಿರಲಿ ಎಂಬ ಸದುದ್ದೇಶದಿಂದ ಶಾಲೆಗಳಲ್ಲಿ ಶಾಲಾ ಸಂಸತ್ತನ್ನು ರಚಿಸಲಾಗುತ್ತದೆ. ಸಂಸತ್ತಿನ ಬಗ್ಗೆ ಈಗಿನಿಂದಲೇ ಅರಿವನ್ನು ಹೊಂದಿರುವುದು ಅವಶ್ಯಕ ಎಂದು ಶ್ರೀ ಸೋಮೇಶ್ವರ ಶಿಕ್ಷಣ ಸಮಿತಿಯ ಗೌರವ ಕಾರ್ಯದರ್ಶಿ ಎಂ.ಬಿ. ರಮಾಣಿ ಹೇಳಿದರು.

ಸಮೀಪದ ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯಲ್ಲಿ ಈಚೆಗೆ 2025-26ನೇ ಸಾಲಿನ ಶಾಲಾ ಸಂಸತ್ತನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಬಿ.ಆರ್. ಅಂಬೇಡ್ಕರರು ನೀಡಿರುವ ಸಂವಿಧಾನವು ನಮಗೆ ಆಡಳಿತ ನಡೆಸಲು ಮೂಲ ಗ್ರಂಥವಾಗಿದೆ. ಈ ಸಂವಿಧಾನದ ಬಗ್ಗೆಯೂ ನಿಮಗೆ ತಿಳುವಳಿಕೆ ಇರಬೇಕೆಂದು ತಿಳಿಸಿದರು.



ಆಡಳಿತ ಮಂಡಳಿಯ ಸದಸ್ಯ ಶ್ರೀಧರ ಕುಲಕರ್ಣಿ ಮಾತನಾಡಿ, ಶಾಲಾ ಸಂಸತ್ತು ನಿಮಗೆ ಉತ್ತಮ ರಾಜಕಾರಣಿಯಾಗಲು ಪ್ರೇರಣೆ ನೀಡುವ ತಳಹದಿಯಾಗಿದೆ. ಇಕೋ ಕ್ಲಬ್, ಆರೋಗ್ಯ ಕ್ಲಬ್‌ಗಳೂ ಸಹ ಮುಂದೆ ನಿಮ್ಮಲ್ಲಿ ವಿವಿಧ ಜ್ಞಾನವನ್ನು ಬೆಳೆಸಿಕೊಂಡು ಮುನ್ನಡೆಯಲು ಸಹಾಯ ಮಾಡುತ್ತವೆ.

ಇಲ್ಲಿ ಪ್ರಧಾನ ಮಂತ್ರಿ ಮತ್ತಿತರ ಖಾತೆಗಳ ಮಂತ್ರಿಗಳಾಗಿರುವ ನೀವು ನಿಮ್ಮ ಉತ್ತಮ ಕಾರ್ಯಗಳ ಮೂಲಕ ಅನುಭವವನ್ನು ಪಡೆಯಿರಿ ಎಂದರು.

ಆಡಳಿತ ಮಂಡಳಿ ಸದಸ್ಯ ರಮಜಾನ್‌ಸಾಬ್ ಘಟ್ಟದ ವೇದಿಕೆಯ ಮೇಲಿದ್ದರು. ಮುಖ್ಯ ಶಿಕ್ಷಕಿ ಟಿ.ಜಿ. ಕಂಬಾಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿ ಶಾಲಾ ಸಂಸತ್ತು, ಆರೋಗ್ಯ ಕೂಟ ಮತ್ತು ಇಕೋ ಕ್ಲಬ್‌ಗಳ ಮಹತ್ವ ಕುರಿತು ತಿಳಿಸಿದರು. ದೈಹಿಕ ಶಿಕ್ಷಕ ಸಿ.ಎಂ. ಗೋದಿ ಪ್ರಮಾಣ ವಚನ ಬೋಧಿಸಿದರು. ಶಿಕ್ಷಕ ಪಿ.ಎಚ್. ತಾಂಬೋಟಿ ಸ್ವಾಗತಿಸಿದರು. ಶಿಕ್ಷಕಿ ಆರ್.ಡಿ. ಜಗ್ಗಲ ನಿರೂಪಿಸಿದರೆ, ಆರ್.ಎಸ್. ನೀರಲಗಿ ವಂದಿಸಿದರು. ಶಾಲಾ ಸಿಬ್ಬಂದಿ ಮತ್ತು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ನಿಡಗುಂದಿಕೊಪ್ಪದಲ್ಲಿ ಗ್ರಾಮ ಗ್ರಂಥಾಲಯ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿಕೊಪ್ಪ ಗ್ರಾಮದಲ್ಲಿ ಗ್ರಾಮ ಗ್ರಂಥಾಲಯವನ್ನು ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶ್ರೀಗಳು ಆಶೀರ್ವಚನ ನೀಡಿ, ಗ್ರಂಥಗಳು ಮನುಷ್ಯನ ಜೀವನಾಡಿ ಇದ್ದಂತೆ. ಹೊಟ್ಟೆಗೆ ಅನ್ನ ಹೇಗೆ ಮುಖ್ಯವೋ, ತಲೆಗೆ ಜ್ಞಾನವೂ ಅಷ್ಟೇ ಮುಖ್ಯ. ಆದ್ದರಿಂದ ಪ್ರತಿ ಗ್ರಾಮದಲ್ಲಿಯೂ ಒಂದು ಗ್ರಂಥಾಲಯ ಇರುವುದು ಅವಶ್ಯಕವಾಗಿದೆ. ಗ್ರಾಮಸ್ಥರು, ಯುವಕರು ಈ ಗ್ರಂಥಾಲಯದ ಸದುಪಯೋಗವನ್ನು ಮಾಡಿಕೊಳ್ಳಬೇಕೆಂದರು.

ಕೋಟುಮಚಗಿಯ ಗ್ರಂಥ ಪಾಲಕ ಸುರೇಶ ಪತ್ತಾರ ವಿಶೇಷ ಉಪನ್ಯಾಸ ನೀಡಿ, ಗ್ರಂಥಗಳು ಮನುಷ್ಯನ ಉತ್ತಮ ಸಂಗಾತಿಗಳು. ಗ್ರಂಥಗಳನ್ನು ಓದುವದರಿಂದ ನೊಂದ ಮನಸ್ಸಿಗೆ ಶಾಂತಿ, ನೆಮ್ಮದಿ ದೊರಕುತ್ತದೆ. ಸದಭಿರುಚಿಯ ಸಾಹಿತ್ಯ ಓದಿದರೆ ಮನುಷ್ಯ ಪರಿಪೂರ್ಣನಾಗುತ್ತಾನೆ. ಗ್ರಂಥಗಳೇ ಇಲ್ಲದಿದ್ದರೆ ದೇವರು ಮೂಕನಾಗುತ್ತಾನೆ, ನ್ಯಾಯ ದೇವತೆ ನಿದ್ರಿಸುತ್ತಾಳೆ, ವಿಜ್ಞಾನ ವಿಶ್ರಾಂತಿ ಪಡೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ನಿವೃತ್ತ ಶಿಕ್ಷಕ ಸರ್ವಿ ಮಾತನಾಡಿದರು. ನಿಡಗುಂದಿ ಗ್ರಾ.ಪಂ ಅಧ್ಯಕ್ಷೆ ಗೀತಾ ಕುಕನೂರ ಅಧ್ಯಕ್ಷತೆ ವಹಿಸಿದ್ದರು. ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಸದಸ್ಯರುಗಳಾದ ಹನುಮಂತಪ್ಪ ಸೂಡಿ, ಸಂಗಮೇಶ ಅಬ್ಬಿಗೇರಿ, ಶಿವಣ್ಣ ಸೂಡಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಅಮರೇಶ ಮೂಲಿಮನಿ ಮತ್ತು ಸಿಬ್ಬಂದಿಯವರು ಉಪಸ್ಥಿತರಿದ್ದರು.

### ಮುಖ್ಯೋಪಾಧ್ಯಾಯ ಸುರೇಶ ಹುಬ್ಬಳ್ಳಿ ನಿವೃತ್ತಿ ನಿಮಿತ್ತ ಅಭಿನಂದನಾ ಸಮಾರಂಭ

## ಹುಬ್ಬಳ್ಳಿಯವರು ಮಕ್ಕಳಿಗೆ ಸಂಸ್ಕಾರವನ್ನೂ ಕಲಿಸಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತಮ್ಮ ಅಮೋಘ 32 ವರ್ಷಗಳ ಸಾರ್ಥಕ ನಿವೃತ್ತಿಯ ಸೇವೆಯೊಂದಿಗೆ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವ ಹಾಗೂ ಶಾಲೆಗೆ ಕೊಡುಗೆ ನೀಡಿದ ಸುರೇಶ ಹುಬ್ಬಳ್ಳಿಯವರ ಕಾರ್ಯ ಪ್ರಶಂಸನೀಯ ಎಂದು ಡಿಡಿಪಿಐ ಆರ್.ಎಸ್. ಬುರಡಿ ಹೇಳಿದರು.

ಇಲ್ಲಿಯ ಸರಕಾರಿ ಮಾದರಿ ಪ್ರಾಥಮಿಕ ದ್ವಿಭಾಷಾ ಶಾಲೆಯ ಮುಖ್ಯೋಪಾಧ್ಯಾಯ ಸುರೇಶ ಹುಬ್ಬಳ್ಳಿ ಅವರು ನಿವೃತ್ತಿ ಹೊಂದಿದ ನಿಮಿತ್ತ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭ ಹಾಗೂ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡುತ್ತಿದ್ದರು.

ತಮ್ಮ 32 ವರ್ಷಗಳ ಸೇವಾವಧಿಯಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಮಕ್ಕಳಿಗೆ ಸಂಸ್ಕಾರವನ್ನು ಸಹ ಕಲಿಸಿದ್ದಾರೆ. ತಮ್ಮ ನಿವೃತ್ತಿ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪಿಯುಸಿ ಪ್ರಾಥಮಿಕ ಶಾಲೆಯ ಪ್ರತಿಭಾನ್ವಿತ 19 ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡಿದ್ದು ಶ್ಲಾಘನೀಯ ಎಂದರು.



ಸುರೇಶ ಹುಬ್ಬಳ್ಳಿ ಮಾತನಾಡಿ, ಮಕ್ಕಳಿಗೆ ಉತ್ತಮ ಶಿಕ್ಷಣ ಸೇವೆ ನೀಡಲು ಸಹಕಾರ ನೀಡಿದ ಇಲಾಖೆ ಮತ್ತು ಸಹ ಶಿಕ್ಷಕರಿಗೆ ಅಭಿನಂದನೆ ತಿಳಿಸಿದರು. ಸಾನ್ನಿಧ್ಯ ವಹಿಸಿದ್ದ ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಸ್ವಾಮೀಜಿ, ಯೋಜನಾ ಪೋಷಣಾಧಿಕಾರಿ ಶಂಕರ ಹಡಗಲಿ ಮಾತನಾಡಿದರು.

ಸುರೇಶ ಹುಬ್ಬಳ್ಳಿ ಹಾಗೂ ದಂಪತಿಗಳನ್ನು ಶಿಕ್ಷಣ ಇಲಾಖೆ, ಶಿಕ್ಷಕರ ಸಂಘ, ಗ್ರಾಮ ಪಂಚಾಯಿತಿ, ಗ್ರಾಮದ ಯುವಕ ಸಂಘಗಳು, ಸಹಪಾಠಿಗಳು, ಸ್ನೇಹಿತರು ಸನ್ಮಾನಿಸಿದರು.

ಪ್ರಾಥಮಿಕ, ಪ್ರೌಢಶಾಲೆ, ಪಿ.ಯು ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಪ್ರವೇಶದ್ವಾರದ ನಾಮ ಫಲಕವನ್ನು ಅನಾವರಣಗೊಳಿಸಿದರು. ಗ್ರಾಮದ ಹಳೆ ವಿದ್ಯಾರ್ಥಿ, ಪ್ರೊಬೆಷನರಿ ಪಿಎಸ್‌ಐ ಅಂದಪ್ಪ ಬಳಿಗೇರ ತಮ್ಮ ಅನಿಸಿಕೆ ಹಂಚಿಕೊಂಡರು.

ಎಸ್‌ಡಿಎಂಸಿ ಅಧ್ಯಕ್ಷ ಗವಿಶಿದ್ದಪ್ಪ ಯಲಿಶಿರುಂದ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಬ್ರಹ್ಮಕುಮಾರಿ ಸರೋಜಕ್ಕ, ವಿ.ಎಂ. ಹಿರೇಮಠ, ಎಸ್.ಆರ್. ಬಂಡಿ, ಡಿ.ಎಸ್. ತಳವಾರ, ಗ್ರಾ.ಪಂ ಸದಸ್ಯ ರುದ್ರಪ್ಪ ಮುಸ್ಕಿನಭಾವಿ, ಕುಬೇರಪ್ಪ ಬೆಂತೂರು, ಅನಸಮ್ಮ ಅಂಬಕ್ಕಿ, ಪಿಡಿಒ ಅಮೀರ ನಾಯಕ, ಎಸ್.ಸಿ. ಭಾವಿ, ಅಶೋಕ ಬೂದಿಹಾಳ, ಮಾಜಿ ಯೋಧ ಪಿ.ಎಸ್. ಗುಂಡಳ್ಳಿ ಮುಂತಾದವರಿದ್ದರು.

ರಂಜನಾ ಚಕ್ರಸಾಲಿ ಸಂಗಡಿಗರು ಪ್ರಾರ್ಥಿಸಿದರು. ಜೆ.ಪಿ. ಶೇಟ ಸ್ವಾಗತಿಸಿದರು. ಅಂಜನಾ ಕರಿಯಲ್ಲಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಜಿ. ಕುರವತ್ತಿಗೌಡ್ರ ನಿರೂಪಿಸಿದರು. ಎಂ.ಪಿ. ಹೊನ್ನಾಪೂರ ವಂದಿಸಿದರು.

ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, ಸುರೇಶ ಹುಬ್ಬಳ್ಳಿಯವರು ಶತಮಾನ ಕಂಡ ಈ ಶಾಲೆಯ ಪ್ರವೇಶ ದ್ವಾರದಲ್ಲಿ ಆಕರ್ಷಣೀಯವಾದ ನಾಮಫಲಕವನ್ನು ಅಂದಾಜು 85 ಸಾವಿರ ರೂ ವೆಚ್ಚದಲ್ಲಿ ಕೊಡುಗೆ ನೀಡಿದ್ದು ಸ್ಮರಣೀಯವಾಗಿದೆ. ಈ ಅಭಿನಂದನಾ ಕಾರ್ಯಕ್ರಮವು ಮುಂದೆ ನಿವೃತ್ತಿ ಹೊಂದುವ ಎಲ್ಲ ಶಿಕ್ಷಕರಿಗೆ ಮಾದರಿಯಾಗಿದೆ. ತಾವು ಮುಖ್ಯೋಪಾಧ್ಯಾಯರಾದ ನಂತರ ಆಂಗ್ಲ ಮಾಧ್ಯಮ ಶಾಲೆಯ ಬದಲಾವಣೆಯನ್ನು ಗ್ರಾಮದ ಗಣ್ಯರ, ಎಸ್‌ಡಿಎಂಸಿ ಅವರ ಸಹಕಾರದೊಂದಿಗೆ ನೆರವೇರಿಸಿದ್ದಾರೆ. ಅವರ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಆಶಿಸಿದರು.

## ಕೃಷ್ಣ ಜಯಂತಿ: ಪೂರ್ವಭಾವಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕೃಷ್ಣ ಜಯಂತಿಯನ್ನು ಆಗಸ್ಟ್ 16ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಅರ್ಥಪೂರ್ಣವಾಗಿ ಆಚರಿಸುವಂತೆ ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ್ ಕೆ.ಆರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಶ್ರೀ ಕೃಷ್ಣ ಜಯಂತಿ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಜಿಲ್ಲೆಯ ತಾಲೂಕು, ಗ್ರಾಮ ಪಂಚಾಯಿತಿ ಹಾಗೂ ಶಾಲೆಗಳಲ್ಲಿಯೂ ಸಹ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು ಎಂದರು.

ಜಯಂತಿ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು. ನಗರದ ಜೋಡು ಮಾರುತಿ ದೇವಸ್ಥಾನದಿಂದ ಶ್ರೀ ಕೃಷ್ಣ ಭಾವಚಿತ್ರದ ಮೆರವಣಿಗೆ ಬೆಳಿಗ್ಗೆ 9 ಗಂಟೆಯಿಂದ ಆರಂಭವಾಗಲಿದೆ. ಮೆರವಣಿಗೆಯಲ್ಲಿ ಕಲಾ ತಂಡಗಳು, ಸಾರ್ವಜನಿಕರು ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸೂಚಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ಕಾರ್ಯಕ್ರಮಕ್ಕೆ ಆಗಮಿಸುವ ಗಣ್ಯರಿಗೆ, ಸಮಾಜದ ಸಾರ್ವಜನಿಕರಿಗೆ ಉಪಹಾರ ವ್ಯವಸ್ಥೆ ಮಾಡಲಾಗುವುದು. ಪ್ರಚಾರಕ್ಕಾಗಿ ನಗರದ ವಿವಿಧೆಡೆ ಬ್ಯಾನರ್ ಅಳವಡಿಸಲಾಗುವುದು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಲಾಗುವುದು. ಕಾರ್ಯಕ್ರಮ ಅರ್ಥಪೂರ್ಣ ಆಚರಣೆಗೆ ಅಗತ್ಯವಿರುವ ಎಲ್ಲ ಕ್ರಮಗಳನ್ನು ವಹಿಸಲಾಗುವುದು ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಕಲಾ ತಂಡಗಳ ಆಯ್ಕೆ, ಜಯಂತಿ ನಿಮಿತ್ತ ಮೆರವಣಿಗೆ, ವೇದಿಕೆ ಕಾರ್ಯಕ್ರಮ, ಆಮಂತ್ರಣ ಪತ್ರಿಕೆ ಮುದ್ರಣ, ಉಪನ್ಯಾಸಕರ ಆಯ್ಕೆ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಸಮುದಾಯದ ಹರೀಶ ಪೂಜಾರ, ಸಮುದಾಯದ ಮುಖ್ಯಸ್ಥರು, ಹಿರಿಯರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಅದ್ದೂರಿ ಸ್ವಾತಂತ್ರ್ಯೋತ್ಸವ ಆಚರಣೆಗೆ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ರೋಣ

79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ತಾಲೂಕಾಡಳಿತ ಅದ್ಧೂರಿಯಿಂದ ಆಚರಿಸಲು ನಿರ್ಧರಿಸಿದ್ದು, ತಾಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು ಎಂದು ತಹಸೀಲ್ದಾರ ನಾಗರಾಜ ಕೆ ಹೇಳಿದರು.

ಅವರು ಸೋಮವಾರ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ಜರುಗಿದ ಶಿವಶರಣ ನುಲಿಯ ಚಂದಯ್ಯ ಜಯಂತಿ ಹಾಗೂ 79ನೇ ಸ್ವಾಂತತ್ರ್ಯೋತ್ಸವ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಆ. 15ರಂದು ತಾಲೂಕಾ ಮಟ್ಟದ ಅಧಿಕಾರಿಗಳು ತಮ್ಮ ಕಚೇರಿಗಳಲ್ಲಿ ಬೆಳಿಗ್ಗೆ 8ರೊಳಗೆ ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿ ಎಸ್.ಆರ್. ಪಾಟೀಲ ಶಾಲಾ ಆವರಣಕ್ಕೆ ಬರಬೇಕು. ಅಲ್ಲಿಂದ ಶಾಲಾ ಮಕ್ಕಳ ಜೊತೆಗೆ ಭಾರತಾಂಬೆಯ ಭಾವಚಿತ್ರದ ಮೆರವಣಿಗೆ ಮೂಲಕ ತಾಲೂಕಾ ಕ್ರೀಡಾಂಗಣಕ್ಕೆ ತೆರಳಿ, ಬೆಳಿಗ್ಗೆ 9ಕ್ಕೆ ಧ್ವಜಾರೋಹಣವನ್ನು ನೆರವೇರಿಸಲಾಗುವುದು ಎಂದರು.

ಆ. 9ರಂದು ಶಿವಶರಣ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರವಿದ್ದು, ಈ ಜಯಂತಿಯನ್ನು ಕೂಡ ಎಲ್ಲ ಕಚೇರಿಗಳಲ್ಲಿ ಕಡ್ಡಾಯವಾಗಿ ಆಚರಿಸಿ, ತಹಸೀಲ್ದಾರ ಕಚೇರಿಯಲ್ಲಿ ಬೆಳಿಗ್ಗೆ 10.30ಕ್ಕೆ ಜರುಗುವ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸಮುದಾಯದವರು, ಅಧಿಕಾರಿಗಳು ಮತ್ತು ಸಾರ್ವಜನಿಕರು ಭಾಗಿಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಸಮಾಜದ ಮುಖಂಡ ಬಾಳಪ್ಪ ಭಜಂತ್ರಿ ಮಾತನಾಡಿ, ಕಳೆದ ಬಾರಿ ನುಲಿಯ ಚಂದಯ್ಯನವರ ಜಯಂತಿ ಆಚರಿಸಿದ ಅನುದಾನ ಇನ್ನೂ ಬಂದಿಲ್ಲ. ನಮ್ಮದು ಸಣ್ಣ ಸಮಾಜವಾಗಿದ್ದು, ಜಯಂತ್ಯುತ್ಸವದ ಅನುದಾನವನ್ನು ನೀಡಿ ಎಂದರು.


ಆಗ ತಹಸೀಲ್ದಾರ ನಾಗರಾಜ ಕೆ ಪ್ರತಿಕ್ರಿಯಿಸಿ, ಸರಕಾರದಿಂದ ಅನುದಾನ ಬಂದ ತಕ್ಷಣ ಒದಗಿಸಲಾಗುವುದು ಎಂದರು.

ಮುಖ್ಯಾಧಿಕಾರಿ ರಮೇಶ ಹೊಸಮನಿ, ಬಿಇಒ ಅರ್ಜುನ ಕಂಬೋಗಿ, ಉಪತಹಸೀಲ್ದಾರ ಜೆ.ಟಿ. ಕೊಪ್ಪದ, ಆರ್.ಎಲ್. ನಾಯಕರ, ಶಿವಪುತ್ರಪ್ಪ ಕಮಸಗಿ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿಗಳು ಮತ್ತು ಸಮುದಾಯದವರು ಉಪಸ್ಥಿತರಿದ್ದರು.

## ರಾಹುಲ್ ಗಾಂಧಿ ಆರೋಪ ಹಾಸ್ಯಾಸ್ಪದ

■ವಿಜಯಸಾಕ್ಷಿ ಸುದ್ದಿ, ಗದಗ

ಮತ ಕಳ್ಳತನದ ಆರೋಪ ಮಾಡಿ ಚುನಾವಣಾ ಆಯೋಗಕ್ಕೆ ಮಸಿ ಬಳಿಯಲು ಯತ್ನಿಸುತ್ತಿರುವ ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್ ಪಕ್ಷದ ನಿಲುವು ಹಾಸ್ಯಾಸ್ಪದವಾಗಿದೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಹೇಳಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇಶದ ಜನರ ವಿಶ್ವಾಸವನ್ನು ಗಳಿಸುವಲ್ಲಿ ರಾಹುಲ್ ಗಾಂಧಿಯವರು ವಿಫಲರಾಗಿದ್ದಾರೆ. ಸೋಲಿನ ಅವಮಾನದಿಂದ ಬಳಲಿ ಸಾಂವಿಧಾನಿಕ ಸಂಸ್ಥೆಗಳ ಮೇಲೆ ಆಧಾರ ರಹಿತ ಸುಳ್ಳು ಆರೋಪ ಮಾಡುತ್ತಿದ್ದಾರೆ. ಇಂದಿರಾ ಗಾಂಧಿಯವರು ತುರ್ತು ಪರಿಸ್ಥಿತಿ ಹೇರುವ ಮೂಲಕ ಸಂವಿಧಾನದ ಕಗ್ಗೊಲೆ ಮಾಡಿದ್ದರು. ಈಗ ರಾಹುಲ್ ಗಾಂಧಿ ಚುನಾವಣಾ ಆಯೋಗದ ಮೇಲೆ ಸುಳ್ಳು ಅಪವಾದ ಹೊರಿಸುವ ಮೂಲಕ ದೇಶದ ಜನತೆಗೆ ಹಾಗೂ ಚುನಾವಣಾ ಆಯೋಗಕ್ಕೆ ಅವಮಾನ ಮಾಡುತ್ತಿದ್ದಾರೆ.

ಈ ಸುಳ್ಳು ಆರೋಪದ ಹಿಂದೆ ಕಾಂಗ್ರೆಸ್ ಸಂಚು ಅಡಗಿದೆ. ಮತ ಕಳ್ಳತನ ಆಗಿರುವ ಬಗ್ಗೆ ತಮ್ಮ ಬಳಿ ಪುರಾವೆ ಇದೆ ಎಂದು ರಾಹುಲ್ ಗಾಂಧಿ ಆದಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹೇಳುತ್ತಿದ್ದಾರೆ. ಆದರೆ ಅವರ ಬಳಿ ಪುರಾವೆ ಇದ್ದಿದ್ದರೆ ಅವರು ನ್ಯಾಯಾಲಯಕ್ಕೆ ಹೋಗಬೇಕೇ ಹೊರತು ಜನರಲ್ಲಿ ಗೊಂದಲ ಉಂಟುಮಾಡಬಾರದು.

ಕಾಂಗ್ರೆಸ್ ನಾಯಕರು ಈ ಸುಳ್ಳಿನ ಅಪಪ್ರಚಾರ ಮಾಡುತ್ತಿರುವುದು ದೇಶದ ಮತದಾರರ ಮುಂದೆ ಕಾಂಗ್ರೆಸ್ ಪಕ್ಷದ ನಾಯಕರು ನಗೆಪಾಟಲಿಗೀಡಾಗಿದ್ದಾರೆಂದು ಹೇಳಿದ್ದಾರೆ.



ಗದುಗಿನ ದಿ ಆರ್ಝಾದ ಕೋ-ಆಪ್ ಬ್ಯಾಂಕ್‌ನಲ್ಲಿ ರವಿವಾರ ಜರುಗಿದ 64ನೇ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಬ್ಯಾಂಕ್ ಚೇರಮನ್ ಹಾಜಿ ಸರಫರಾಜ ಅಹ್ಮದ್ ಎಸ್. ಉಮಚಗಿ, ಡಾ. ರಾಜಶೇಖರ ಬಳ್ಳಾರಿ, ಡಾ. ಪ್ಯಾರ್‌ಅಲಿ ನೂರಾನಿ, ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಸೇರಿದಂತೆ ನಿರ್ದೇಶಕರು, ಗಣ್ಯರು ಪಾಲ್ಗೊಂಡಿದ್ದರು.

## Forgive Me ಎಂದು ಡೆತ್ ನೋಟ್ ಬರೆದಿಟ್ಟು 13 ವರ್ಷದ ಬಾಲಕ ಆತ್ಮಹತ್ಯೆ..!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

Forgive Me ಎಂದು ಡೆತ್ ನೋಟ್ ಬರೆದಿಟ್ಟು 13 ವರ್ಷದ ಬಾಲಕ ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಗರದ ಸಿಕೆ ಅಚ್ಚುಕಟ್ಟುವಿನಲ್ಲಿ ನಡೆದಿದೆ. ಗಂಧಾರ್(13) ಆತ್ಮಹತ್ಯೆಗೆ ಶರಣಾದ ಬಾಲಕನಾಗಿದ್ದು, ಬಾಲಕ ರಾತ್ರಿ ಊಟ ಮಾಡಿ ಸಹಜವಾಗಿಯೇ ರೂಮ್‌ನಲ್ಲಿ ಮಲಗಿದ್ದಾನೆ.

## ಕರ್ನಾಟಕ ದೇವದಾಸಿ ಪದ್ಧತಿ ತಡೆ ಮಸೂದೆ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಹಿಳಾ ಮತ್ತು ಮಕ್ಕಳ ಹಕ್ಕು ಅಭಿವೃದ್ಧಿ ಇಲಾಖೆಯ ಮುತುವರ್ಜಿಯಿಂದ, ರಾಜ್ಯದಲ್ಲಿ ಸಾಮಾಜಿಕ ದೌರ್ಜನ್ಯದ ದೇವದಾಸಿ ಪದ್ಧತಿ ನಿರ್ಮೂಲನೆ ಮಾಡುವ ಮತ್ತು ದೇವದಾಸಿ ಮಹಿಳೆಯರ ಮಕ್ಕಳ ತಂದೆಯನ್ನು ಗುರುತಿಸುವ ಹಕ್ಕು ಸೇರಿದಂತೆ ಸಮಗ್ರ ಪುನರ್ವಸತಿ ಕಲ್ಪಿಸುವ ಕರ್ನಾಟಕ ದೇವದಾಸಿ ಪದ್ಧತಿ (ತಡೆಗಟ್ಟುವಿಕೆ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ಮಸೂದೆ-2025ಕ್ಕೆ ಕ್ರಮವಹಿಸಿರುವುದನ್ನು ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘ, ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ಮಕ್ಕಳ ಹೋರಾಟ ಸಮಿತಿಗಳ ಗದಗ ಜಿಲ್ಲಾ ಸಮಿತಿ ಸ್ವಾಗತಿಸಿದೆ.



ಈ ಕುರಿತು ಮಾತನಾಡಿದ ಜಿಲ್ಲಾ ಮುಖಂಡ ಬಾಲು ರಾಠೋಡ, 2007ರಿಂದಲೇ ಈ ಹಕ್ಕೊತ್ತಾಯವನ್ನು ಸರಕಾರದ ಮುಂದೆ ಮಂಡಿಸುತ್ತಾ ಬರಲಾಗಿದೆ. 15 ವರ್ಷಗಳ ನಂತರವಾದರೂ ಈ ಮಸೂದೆ ಈಗ ಹೊರಬರುತ್ತಿರುವುದು ಸಂತಸದ ವಿಷಯವಾಗಿದೆ. ಸಾಮಾಜಿಕ ದೌರ್ಜನ್ಯ ಹಾಗೂ ತಾರತಮ್ಯದ ಭಾಗವಾಗಿ ಬಲವಂತವಾಗಿ ಜಾರಿಯಲ್ಲಿರುವ ಈ ಪದ್ಧತಿಯನ್ನು ತಡೆಯಲು ಹಾಲಿ ಕಾಯ್ದೆಗಳು ಹಾಗೂ ಪುನರ್ವಸತಿ ಯೋಜನೆಗಳು ಅಸಮರ್ಪಕವಾಗಿವೆ.

ರಾಜ್ಯ ಸರಕಾರ ಸಾಮಾಜಿಕ ದೌರ್ಜನ್ಯಕ್ಕೆ ತುತ್ತಾದ ಎಲ್ಲ ಪರಿಶಿಷ್ಟ ಜಾತಿ/ಪಂಗಡಗಳ ಎಲ್ಲ ಸದಸ್ಯರ ಗಣತಿ ನಡೆಸಿ ಅವರೆಲ್ಲರ ಸ್ವಾವಲಂಬಿ ಬದುಕಿಗೆ ಪರಿಣಾಮಕಾರಿಯಾದ ಪುನರ್ವಸತಿಯನ್ನು ಕೈಗೊಳ್ಳುವುದು ದೌರ್ಜನ್ಯದ ದೇವದಾಸಿ ಪದ್ಧತಿ ತಡೆಯಲು ಹಾಗೂ ಮಸಣ ಕಾರ್ಮಿಕರ ಬಿಟ್ಟಿ ಚಾಕರಿ ತಡೆಯಲು ಮತ್ತು ಒಳಚರಂಡಿ, ಮಲಗುಂಡಿ ಶುಚಿ ಕೆಲಸಗಾರರನ್ನು ರಕ್ಷಿಸಲು ಇರುವ ಏಕೈಕ ದಾರಿಯಾಗಿದೆ.

ಈ ಕೂಡಲೇ ಮಸೂದೆಯನ್ನು ಸಾರ್ವಜನಿಕ ಚರ್ಚೆಗೆ ಇಡಬೇಕು ಮತ್ತು ಅಲ್ಲಿನ ಅಭಿಪ್ರಾಯಗಳನ್ನು ಗಮನಿಸಿ, ವಿಳಂಬವಾಗುವುದನ್ನು ತಪ್ಪಿಸಿ, ಬೇಗನೆ ಕಾಯ್ದೆಯಾಗಿಸುವಂತೆ ನಮ್ಮೆರಡೂ ಸಂಘಗಳು ಮನವಿ ಮಾಡುತ್ತವೆ ಎಂದು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತ ಸಮುದಾಯದ ಐಐಎಂ, ಐಐಟಿ, ಐಐಎಸ್‌ಇ ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ವಿದ್ಯಾರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 30.09.2025 ನಿಗದಿಪಡಿಸಲಾಗಿರುತ್ತದೆ.

ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ.8.00 ಲಕ್ಷಕ್ಕಿಂತ ಮೀರಿರಬಾರದು.

ಹಿಂದಿನ ವರ್ಷದ ಪರೀಕ್ಷೆಯಲ್ಲಿ ಅನುತ್ತೀರ್ಣರಾದ (ಬ್ಯಾಕ್‌ಲಾಗ್) ವಿದ್ಯಾರ್ಥಿಗಳಿಗೆ ಈ ಪ್ರೋತ್ಸಾಹಧನ ಪಡೆಯುವ ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಹುಬ್ಬಳ್ಳಿ ರೋಡ್, ಗದಗ ಅವರನ್ನು ಕಚೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ.

## ಶರಣಬಸಪ್ಪ ಗುಡಿಮನಿಗೆ 'ವಾಣಿಜ್ಯ ರತ್ನ' ಪ್ರಶಸ್ತಿ




■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ ಹಮ್ಮಿಕೊಂಡಿದ್ದ 97ನೇ ಸಂಸ್ಥಾಪಕರ ದಿನಾಚರಣೆ ಸಮಾರಂಭದಲ್ಲಿ ಗದುಗಿನ ವಿಜಯನಿಧಿ ಅಗ್ರೋ ಇಂಡಸ್ಟ್ರೀಸ್‌ನ ಮಾಲೀಕರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರೂ ಆದ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರಿಗೆ ಪ್ರತಿಷ್ಠಿತ 'ವಾಣಿಜ್ಯ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿತು.

ಹುಬ್ಬಳ್ಳಿ ಎಪಿಎಂಸಿ ಬಳಿಯ ಹು-ಧಾ ವಿವಿಧೋದ್ದೇಶ ವಸ್ತುಪ್ರದರ್ಶನ ಕೇಂದ್ರದಲ್ಲಿ ಏರ್ಪಡಿಸಿದ್ದ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ (ಕೆಸಿಸಿಐ) 97ನೇ ಸಂಸ್ಥಾಪಕರ ದಿನಾಚರಣೆಯ ವರ್ಣರಂಜಿತ ಕಾರ್ಯಕ್ರಮದಲ್ಲಿ ಸಾಧಕ ವಾಣಿಜ್ಯೋದ್ಯಮಿಗಳಾದ ಶರಣಬಸಪ್ಪ ಗುಡಿಮನಿ, ಜಯಂತ ಹುಂಬರವಾಡಿ, ಪ್ರಕಾಶ ಬಾಫಣಾ, ರವೀಂದ್ರಕುಮಾರ ಬೆಕನಾಳ, ಸಿದ್ಧಣ್ಣ ನಾಲ್ವಾಡ, ದೇವಕಿ ಯೋಗಾನಂದ ಅವರಿಗೆ ಜೆ.ಎಸ್.ಡಬ್ಲ್ಯೂ ಎನರ್ಜಿ ನಿರ್ದೇಶಕ ಪಾರ್ಥ ಜಿಂದಾಲ್ ಅವರು ವಾಣಿಜ್ಯ ರತ್ನ ಪ್ರಶಸ್ತಿ ಪ್ರದಾನ ಮಾಡಿ ಸಾಧಕರ ಸಾಧನೆಯನ್ನು ಶ್ಲಾಘಿಸಿದರು.

ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಎಸ್.ಪಿ. ಸಂಶಿಮಠ, ಉಪಾಧ್ಯಕ್ಷ ಸಂದೀಪ ಬಿಡಸಾರಿಯಾ, ಪ್ರವೀಣ ಅಂಗಡಿ, ಸಂಸ್ಥಾಪನಾ ದಿನಾಚರಣಾ ಸಮಿತಿಯ ಚೇರಮನ್ ಪ್ರಕಾಶ ಲಿಂಬಯ್ಯಸ್ವಾಮಿಮಠ, ಶಂಕ್ರಣ್ಣ ಮುನವಳ್ಳಿ, ರವೀಂದ್ರ ಬಳಿಗಾರ, ಮಹೇಂದ್ರ ಸಿಂಘಿ ಸೇರಿದಂತೆ ಗಣ್ಯಮಾನ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಶಿವಮೊಗ್ಗದಲ್ಲಿ ನಡೆದ 3ನೇ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಗದುಗಿನ ಅಮರೇಶ್ವರ ನಗರದ ರಾಯಲ್ ಯುಥ್ ಮಾರ್ಷಲ್ ಆರ್ಟ್ಸ್ ಅಸೋಸಿಯೇಶನ್ ವಿದ್ಯಾರ್ಥಿಗಳು ಭಾಗವಹಿಸಿ ಜಿಲ್ಲೆಗೆ ಕೀರ್ತಿಯನ್ನು ತಂದಿದ್ದಾರೆ.

ವಿದ್ಯಾರ್ಥಿಗಳಾದ ಸೈಫ ದೊಡ್ಡಮನಿ (ತೃತೀಯ), ವಿರಾಟ ಚವ್ಹಾಣ (ದ್ವಿತೀಯ), ರಿಯಾನ್‌ಮಲ್ಲಿಕ್ ಸಿಂಧನೂರ (ಪ್ರಥಮ), ರುಬಯ ಕೋಣಸಾಗರ (ಪ್ರಥಮ), ಸಂಪ್ರಿತ ಹೂಗಾರ (ಪ್ರಥಮ), ತನ್ವೀರ ಕದಡಿ (ದ್ವಿತೀಯ), ಪ್ರವೀಣ ಶಿರಿಯಣ್ಣಮ್ಮನವರ (ಪ್ರಥಮ), ಭರತ ದೊಡ್ಡಮನಿ (ಪ್ರಥಮ), ಹನಮಂತಗೌಡ ಪಾಟೀಲ (ಪ್ರಥಮ), ಸುಬ್ರಮಣ್ಯ ಕಬಸೂರ (ದ್ವಿತೀಯ), ರಿಯಾನ್ ಹಾನಗಲ್ಲ (ಪ್ರಥಮ), ಗಗನ ನಿಂಬನಾಯ್ಕರ (ಪ್ರಥಮ), ಮಹಮ್ಮದಹಾಜಿದ ಕಾಗದಗಾರ (ತೃತೀಯ), ರುಕ್ಕಯ್ಯ ಬೇಪಾರಿ (ಪ್ರಥಮ), ಭೂಮಿಕಾ ನಿಂಬನಾಯ್ಕರ (ಪ್ರಥಮ), ಪ್ರಣವಿ ಕೇರಿ (ದ್ವಿತೀಯ) ಸ್ಥಾನ ಪಡೆದುಕೊಂಡಿದ್ದಾರೆ.

ರಾಯಲ್ ಯುಥ್ ಮಾರ್ಷಲ್ ಆರ್ಟ್ಸ್ ಮುಖ್ಯ ತರಬೇತುದಾರ ಮೆಹಬೂಬ ದೊಡ್ಡಮನಿ, ಟೀಮ್ ಮ್ಯಾನೇಜರ್ ಸೀಮಾನಾಜ್ ದೊಡ್ಡಮನಿ, ಪಾಲಕರು, ಅಮರೇಶ್ವರ ನಗರದ ಗುರು-ಹಿರಿಯರು ವಿಜೇತ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka